ಸಂಪುಟ : 9 ಸಂಚಿಕೆ 185 ಪುಟ : 4 ಬೆಲೆ: 3.00 ಗುರುವಾರ ಆಗಸ್ಟ್ 29 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶೇರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 185 Pages : 4 Price : 3.00 Thursday August 29 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಆಗಸ್ಟ್ 29ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ

ವಾರ್ಡ್ ನಂ. 19, 24,17ರಲ್ಲಿ ಮೀನದ ಮಾರ್ಕೆಟ್, ಬಡಿಗೇರ ಲೈನ್, ಚವ್ಹಾಣದವರ ಲೈನ್, ಮಣ್ಣಮ್ಮನವರ ಲೈನ್, ನವಾಜಿಯವರ ಲೈನ್, ದುರ್ಗಮ್ಮನಗುಡಿ ಲೈನ್, ಭಾಗ-1, ಭಾಗ-2 ತಳವಾರ ಓಣಿ, ಕೆಲವು ಉಳಿದ ಭಾಗಗಳು. ವಾರ್ಡ್ ನಂ. 21, 22ರಲ್ಲಿ ವಿಜಯನಗರದ ಭಾಗಗಳು, ಟವರ್ ಕಂಬ, ಕರುಗಲ್ ಲೇಔಟ್, ಶಿಗ್ಗಾಂವಿ ಲೇಔಟ್, ಕಮತರ ಪ್ಲಾಟ್, ವಾಲ್ಮೀಕಿ ಭವನ ಉಳಿದ ಭಾಗಗಳ, ವಾರ್ಡ್ ನಂ. 11ರಲ್ಲಿ ನಿಸರ್ಗ ಬಡಾವಣೆ, ಕರಿಯಮ್ಮನಕಲ್ಲು ಪಿ.& ಟಿ. ಕ್ವಾರ್ಟರ್ಸ್, ಗಣಪತಿ ಕಟ್ಟಿ ಮಾರುತಿ ಗುಡಿ, ಗಾರ್ಡನ್ ಲೈನ್, ಉಳಿದ ಭಾಗಗಳು, ವಾರ್ಡ್ ನಂ. 27, 28ರಲ್ಲಿ ಪಂಚಾಕ್ಷರಿ ನಗರ 3ನೇ ಕ್ರಾಸ್, 2ನೇ ಕ್ರಾಸ್, ಕೆಲವು ಭಾಗಗಳು ಸ್ಟೇಡಿಯಮ್, ನಂದಿಶ್ವರಮಠದ ಹಿಂದಿನ ಭಾಗ ಕುಲಕರ್ಣಿಯವರ ಲೈನ್, ಹೊಸಮನಿಯವರ ಲೈನ್, ರೊಟ್ಟಿಯವರ ಲೈನ್, ಕೊಪ್ಪದವರ ಲೈನ್, ತಂಬ್ರಳ್ಳಿ ಮಠದ ಲೈನ್, ಸಿ.ಎಸ್. ಪಾಟೀಲರ ಲೈನ್, ನಾಗರಕಟ್ಟಿ, ಕೆಲವು ಉಳಿದ ಭಾಗಗಳು, ವಾರ್ಡ್ ನಂ. 21,22,23 ಅಕ್ಕಿ ಪ್ಲಾಟ್, ಕಮತರ ಪ್ಲಾಟ್, ಕರಿಬಿಷ್ಠಿಯವರ ಲೈನ್, ಖಾರದಭಟ್ಟಿ ಲೈನ್, ಜಕ್ಕಲಿಯವರ ಲೈನ್, ಶರಣಪ್ಪ ಪಾಟೀಲ್ ಲೈನ್, ರಾಚೋಟೇಶ್ವರ ಗುಡಿಯ ಮುಂದಿನ ಭಾಗ, ಮಡಿವಾಳರ ಲೈನ್, ಉಳಿದ ಕೆಲವು ಭಾಗಗಳು. ವಾರ್ಡ್ ನಂ. 10, 6, 7 ಸಿಹಿ ನೀರಿನ ಭಾವಿ ಸೆಟ್, ಪೆಂಡಾರ ಓಣಿ, ಮಾನೆದರ ಲೇಔಟ್, ಗಣೇಶ ಲೇಔಟ್, ಕಲ್ಮನಿಯವರ ಲೈನ್, ನಂದರಗಿಯವರ ಓಣಿ, ಅಬ್ಬಿಗೇರಿ ಲೈನ್, ಮಲ್ಲೇಶಪ್ಪರ ಲೈನ್, ಗಚ್ಚಿಯವರ ಲೈನ್, ಹುಚ್ಚನಗೌಡ್ರ ಲೈನ್, ಬಚ್ಚಲಕ್ಕಮ್ಮನ ಗುಡಿ ಲೈನ್,

ವಿಶೇಷ ಸೂಚನೆ

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಸಾರ್ವಜನಿಕ ಹಿತದೃಷ್ಟಿಯಿಂದ ಬಳಕೆ ಮಾಡಲು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೃಷಿಭಾಗ್ಯ ಯೋಜನೆಯಡಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕಿನ ರೈತರು 2024-25ನೇ ಸಾಲಿನಲ್ಲಿ, ತಾಲೂಕುಗಳಲ್ಲಿ ಕೃಷಿಭಾಗ್ಯ ಯೋಜನೆಯನ್ನು ಮಳೆಯಾಶ್ರಿತ ಕೃಷಿ ನೀತಿ-2014ರನ್ವಯ ಪ್ಯಾಕೇಜ್ ಮಾದರಿಯಲ್ಲಿ ಅನುಷ್ಠಾನಗೊಳಿಸಲು ಸರ್ಕಾರವು ಆದೇಶ ಹೊರಡಿಸಿದೆ.

ಕೃಷಿಭಾಗ್ಯ ಯೋಜನೆಯ ಎಲ್ಲಾ ಘಟಕಗಳನ್ನು (ಕ್ಷೇತ್ರಬದು, ಕೃಷಿಹೊಂಡ, ಪಾಲಿಥಿನ್ ಹೊದಿಕೆ-ಕೆಂಪು ಮಣ್ಣಿನಲ್ಲಿ ಮಾತ್ರ), ಡೀಲ್/ಪೆಟ್ರೋಲ್/ಸೋಲಾರ್ ಪಂಪ್‌ಸೆಟ್, ತಂತಿಬೇಲಿ, ನೆರಳು ಪರದೆ ಹಾಗೂ ಸೂಕ್ಷ್ಮ ನೀರಾವರಿ ಘಟಕ) ರೈತರು ಅನುಷ್ಠಾನಗೊಳಿಸುವುದು ಕಡ್ಡಾಯವಾಗಿರುತ್ತದೆ.

ಈ ಹಿಂದೆ ಕೃಷಿ ಇಲಾಖೆ ಅಥವಾ ಇತರೆ ಇಲಾಖೆಯಿಂದ ಯಾವುದೇ ಯೋಜನೆಯಡಿ ಕೃಷಿ ಹೊಂಡದ ಫಲಾನುಭವಿಯಾಗಿದ್ದಲ್ಲಿ ಅಂತಹ ರೈತರು ಈ ಯೋಜನೆಯಡಿ ಅರ್ಹರಾಗಿರುವುದಿಲ್ಲ.ನಿಗದಿತ ಗುರಿಗಿಂತ ಹೆಚ್ಚಿನ ಅರ್ಜಿಗಳು ಬಂದಲ್ಲಿ ಲಾಟರಿ ಮುಖಾಂತರ ಆಯ್ಕೆ ಮಾಡಲಾಗುವುದು.

ಅರ್ಜಿಗಳು ಮೊದಲ ಬಂದವರಿಗೆ ಮೊದಲ ಆದ್ಯತೆ ನೀಡಲಾಗುವುದು, ಆಸಕ್ತಿಯುಳ್ಳ ರೈತರು ತಮಗೆ ಸಂಬಂಧಿಸಿದ ರೈತ ಸಂಪರ್ಕ ಕೇಂದ್ರಗಳಲ್ಲಿ ಅರ್ಜಿಗಳನ್ನು (ಪಹಣಿ, ಆಧಾರ್ ಕಾರ್ಡ್, ಬ್ಯಾಂಕ್ ಪುಸ್ತಕ ಝರಾಕ್ಸ್ ಪ್ರತಿ) ಸೆಪ್ಟೆಂಬರ್ 15ರೊಳಗಾಗಿ ಸಲ್ಲಿಸಲು ತಾಲೂಕ ಕೃಷಿ ಇಲಾಖೆ ಸಹಾಯಕ ಕೃಷಿ ನಿರ್ದೇಶಕ ರೇವಣಪ್ಪ ಮನಗೂಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗವಿಸಿದ್ದೇಶ್ವರ ಶ್ರೀಗಳ ಮೌನ ಅನುಷ್ಠಾನ ಇಂದಿನಿಂದ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲೋಕ ಕಲ್ಯಾಣಕ್ಕಾಗಿ, ಯೋಧರ ಹಾಗೂ ರೈತರ ಒಳತಿಗಾಗಿ ತಾಲೂಕಿನ ಆದರದಹಳ್ಳಿ ಗವಿ ಸಿದ್ದೇಶ್ವರ ಗುರುಪೀಠದ ಕುಮಾರ ಮಹಾರಾಜರ 12 ದಿನಗಳ ಮೌನವ್ರತ ಅನುಷ್ಠಾನ ಗುರುವಾರ ಮಧ್ಯಾಹ್ನ 3 ಗಂಟೆಯಿಂದ ಕೈಗೊಳ್ಳಲಿದ್ದಾರೆ ಎಂದು ಗವಿ ಸಿದ್ದೇಶ್ವರ ಮಠದ ಕಮಿಟಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

12 ದಿನಗಳ ಕಾಲ ನಡೆಯುವ ಈ ಮೌನ ಅನುಷ್ಠಾನದಲ್ಲಿ ಶ್ರೀಮಠದ ಭಕ್ತರು ವಿವಿಧ ನಿತ್ಯ ಧಾರ್ಮಿಕ ಕೈಂಕರ್ಯಗಳನ್ನು, ದಾಸೋಹ ಸೇವೆಗಳನ್ನು ನಡೆಸಲಿದ್ದಾರೆ. ಆ.29ರಿಂದ ಪ್ರಾರಂಭವಾಗಿ ಸೆಪ್ಟೆಂಬರ್ 9ರಂದು ಮಂಗಳವಾಗಲಿದೆ.

ಅನುಷ್ಠಾನದ ಕುರಿತು ಶ್ರೀ ಕುಮಾರ ಮಹಾರಾಜರು, ಜಗತ್ತಿನ ಕಲ್ಯಾಣಕ್ಕಾಗಿ ಕೈಗೊಂಡ ಮೌನವ್ರತ ಫಲ ಕೊಡಲಿದೆ. ಸಾಂಕ್ರಾಮಿಕ ರೋಗದ ಪರದಾಟ ನಿಲ್ಲಲಿದೆ. ಮುಂದಿನ ದಿನಮಾನದಲ್ಲಿ ರೈತರಿಗೆ ಹಾಗೂ ಯೋಧರಿಗೆ ಒಳಿತಾಗಲಿದೆ ಎಂದು ನುಡಿದಿದ್ದಾರೆ.

### ಪತ್ರಿಕಾಗೋಷ್ಠಿಯಲ್ಲಿ ಉತ್ಸವ ಸಮಿತಿ ಚೇರಮನ್ ಚಂದ್ರು ಬಾಳಿಹಳ್ಳಿಮಠ ಮಾಹಿತಿ

# ‘ಗದಗ ಉತ್ಸವ-2024’ ಆ.30ರಿಂದ

■ವಿಜಯಸಾಕ್ಷಿ ಸುದ್ದಿ, ಗದಗ

ಕಳೆದ 24 ವರ್ಷಗಳಿಂದ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ‘ಗದಗ ಉತ್ಸವ’ ಆಯೋಜಿಸುತ್ತ ಬಂದಿದೆ. ಈ ವರ್ಷ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ಗ್ರಾಮೀಣ ಮತ್ತು ಸಣ್ಣ ಉದ್ಯಮ ವಿಭಾಗ, ಜಿಲ್ಲಾ ಪಂಚಾಯತ್ ಆಶ್ರಯದಲ್ಲಿ ಕೈಗಾರಿಕಾ ವಸ್ತುಪ್ರದರ್ಶನ ಹಾಗೂ ಮಾರಾಟ ಮೇಳ ‘ಗದಗ ಉತ್ಸವ-2024’ ಇದೇ ಆಗಸ್ಟ್ 30ರಿಂದ ಸೆ. 3ರವರೆಗೆ ತೋಂಟದ ಸಿದ್ಧಲಿಂಗೇಶ್ವರ ಕಲ್ಯಾಣ ಕೇಂದ್ರದಲ್ಲಿ ನಡೆಯಲಿದೆ ಎಂದು ಉತ್ಸವ ಸಮಿತಿ ಚೇರಮನ್ ಚಂದ್ರು ಬಾಳಿಹಳ್ಳಿಮಠ ಹೇಳಿದರು.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗದಗ ಉತ್ಸವ ಸಂದರ್ಭದಲ್ಲಿ ಶ್ರೇಷ್ಠ ವರ್ತಕ, ಶ್ರೇಷ್ಠ ಉದ್ಯಮಿ ಪ್ರಶಸ್ತಿ ಪ್ರದಾನ, ಮಹಿಳೆಯರಿಗಾಗಿ ವಿಶೇಷ ಕಾರ್ಯಕ್ರಮ, ಸಂವಾದ




ಕಾರ್ಯಕ್ರಮಗಳು ನಡೆಯಲಿವೆ ಎಂದು ತಿಳಿಸಿದರು.

ಆ. 30ರಂದು ಸಂಜೆ 4.30ಕ್ಕೆ ಕಾನೂನು, ಪ್ರವಾಸೋದ್ಯಮ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಉತ್ಸವಕ್ಕೆ ಚಾಲನೆ ನೀಡಲಿದ್ದಾರೆ. ಜ.ಡಾ. ತೋಂಟದ ಸಿದ್ಧರಾಮ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಮುಖ್ಯ ಅತಿಥಿಗಳಾಗಿ ಸಂಸದ ಬಸವರಾಜ ಬೊಮ್ಮಾಯಿ, ಪಿ.ಸಿ. ಗದ್ದಿಗೌಡರ, ವಿ.ಪ ಸದಸ್ಯರಾದ ಪ್ರದೀಪ ಶೆಟ್ಟರ್, ಸಲೀಂ ಅಹ್ಮದ್,

> ಆ. 31ರಂದು ಕೈಗಾರಿಕಾ ನೀತಿ ಕುರಿತು ಶಿವಪುತ್ರಪ್ಪ ಹರಿಜನ ಅವರಿಂದ ವಿಚಾರ ಸಂಕಿರಣ, ಮಹಿಳಾ ಘಟಕದಿಂದ ಅಡುಗೆ ಸ್ಪರ್ಧೆ, ರಕ್ತದಾನ ಶಿಬಿರ, ಸಂವಾದ, ಆ. 2ರಂದು ರಫ್ತು ಕುರಿತು ಪಿ.ಎಸ್. ಮಲ್ಲಿಕಾರ್ಜುನ ಅವರಿಂದ ವಿಚಾರ ಸಂಕಿರಣ ನಡೆಯಲಿದೆ ಎಂದು ಚಂದ್ರು ಬಾಳಿಹಳ್ಳಿಮಠ ಮಾಹಿತಿ ನೀಡಿದರು

ಎಸ್.ವಿ. ಸಂಕನೂರ, ಶಾಸಕರಾದ ಸಿ.ಸಿ. ಪಾಟೀಲ, ಜಿ.ಎಸ್. ಪಾಟೀಲ, ಡಾ. ಚಂದ್ರು ಲಮಾಣಿ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಆಯುಕ್ತೆ ಕೃಷ್ಣ ಗುಂಜನ್, ಕಾರ್ಯಕರ್ತೆ ಸಿ. ಶಿಖಾ, ಸಿ.ಎಸ್. ಯೋಗೇಶ್ ಪಾಲ್ಗೊಳ್ಳಲಿದ್ದಾರೆ ಎಂದರು.

ಸೆಪ್ಟೆಂಬರ್ 1ರಂದು ಶ್ರೇಷ್ಠ ವರ್ತಕ, ಶ್ರೇಷ್ಠ ಉದ್ಯಮಿ ಪ್ರಶಸ್ತಿ ಪ್ರದಾನ ನಡೆಯಲಿದೆ. ಸಾನ್ನಿಧ್ಯವನ್ನು ಅನ್ನದಾನೇಶ್ವರ ಸಂಸ್ಥಾನ ಮಠದ ಮುಪ್ಪಿನ ಬಸವಲಿಂಗ ಸ್ವಾಮಿಜಿಗಳು ವಹಿಸಿಕೊಳ್ಳಲಿದ್ದು, ಮುಖ್ಯ ಅತಿಥಿಗಳಾಗಿ ಜಯಂತ ಅಶೋಕ ಹುಂಬರವಾಡಿ, ರಮೇಶಚಂದ್ರ ಲಹೋಟಿ, ಎಸ್.ಪಿ. ಸಂಶಿಮಠ, ಶಂಕ್ರಣ್ಣ ಮುನವಳ್ಳಿ, ರಘು ನಾಯಕ ಆಗಮಿಸಲಿದ್ದು, ಜೀವಮಾನ ಸಾಧನೆ ಪ್ರಶಸ್ತಿಯನ್ನು ಮಲ್ಲಿಕಾರ್ಜುನ ಸುರಕೋಡ, ಶರಣಪ್ಪ ಕುರಡಗಿ ಅವರಿಗೆ ಪ್ರದಾನ ಮಾಡಲಾಗುವುದು. 6 ಜನರಿಗೆ ಶ್ರೇಷ್ಠ ವರ್ತಕ, ಶ್ರೇಷ್ಠ ಉದ್ಯಮಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಅಶೋಕ ಪಾಟೀಲ್, ಉಮೇಶ್ ನಾಲ್ವಾಡ, ಈಶ್ವರಪ್ಪ ಮುನವಳ್ಳಿ, ತಾತನಗೌಡ ಪಾಟೀಲ್, ಪ್ರಕಾಶ್ ಉಗಲಾಟದ, ಅಶೋಕ ಪಾಟೀಲ್, ಉಮೇಶ್ ಹುಬ್ಬಳ್ಳಿ, ಮಂಜುನಾಥ ವೀರಲಿಂಗಮಠ, ವಿಜಯಕುಮಾರ ಹಿರೇಮಠ, ಶಿವಯ್ಯಜ್ಜ ನಲ್ವತ್ವಾದಮಠ, ದಾನಯ್ಯ ಗಣಾಚಾರಿ ಮುಂತಾದವರು ಉಪಸ್ಥಿತರಿದ್ದರು.

### ಜಿಲ್ಲೆಯ ಉದ್ದಿಮೆಗಳ ಪ್ರತಿನಿಧಿಗಳೊಂದಿಗೆ ನಡೆದ ಸಭೆಯಲ್ಲಿ ಡಿಸಿ ಗೋವಿಂದರೆಡ್ಡಿ ಸೂಚನೆ

# ಉದ್ದಿಮೆದಾರರು ಶೈಕ್ಷಣಿಕ ಕ್ರಾಂತಿಗೆ ಕೈಜೋಡಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿರುವ ಉದ್ದಿಮೆಗಳು ಹಾಗೂ ಕೈಗಾರಿಕಾ ಸಂಸ್ಥೆಗಳು ತಮ್ಮ ಸಿಎಸ್‌ಆರ್ ಅನುದಾನವನ್ನು ಸ್ಥಳೀಯ ಸರ್ಕಾರಿ ಶಾಲಾ ಕಟ್ಟಡಕ್ಕೆ ಬಳಕೆ ಮಾಡಬೇಕು. ಈ ಮೂಲಕ ಶೈಕ್ಷಣಿಕ ಕ್ರಾಂತಿಗೆ ಉದ್ದಿಮೆದಾರರು ಸಹಕರಿಸಬೇಕೆಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಸಭಾಭವನದಲ್ಲಿ ಬುಧವಾರ ಜಿಲ್ಲೆಯ ಉದ್ದಿಮೆಗಳ ಪ್ರತಿನಿಧಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಿಎಸ್‌ಆರ್ ಅನುದಾನವನ್ನು ಸ್ಥಳಿಯ ಶಾಲೆಗಳಿಗೆ ನೀಡಬಹುದು ಇಲ್ಲವೇ ತಾವೇ ಸಿಎಸ್‌ಆರ್ ಅನುದಾನದಿಂದ ಇಲಾಖೆ ಗುರುತಿಸಿದ ನಿವೇಶನದಲ್ಲಿ ಶಾಲಾ ಕೊಠಡಿ ಕಟ್ಟಡ ನಿರ್ಮಾಣ ಮಾಡುವ ಮೂಲಕ ಶೈಕ್ಷಣಿಕ ಪ್ರಗತಿಗೆ ತಮ್ಮ ಸಂಸ್ಥೆಯಿಂದ ಕೊಡುಗೆ ನೀಡಿದಂತಾಗುತ್ತದೆ. ತಾವು ನೀಡಿದ ಕೊಡುಗೆ ಶಾಶ್ವತವಾಗಿರಲಿದೆ. ಅನುದಾನ ನೀಡುವುದರಿಂದ ಇಂಡಸ್ಟ್ರಿ ಕಂಪನಿಯ ಬ್ರ್ಯಾಂಡಿಂಗ್ ಮಾಡಲು



ಸಹಕಾರಿಯಾಗುತ್ತದೆ. ಇಲ್ಲಿಯ ಮೂಲಭೂತ ಸೌಕರ್ಯಗಳ ಬಳಸಿ ಇಂಡಸ್ಟ್ರಿಗಳು ನಡೆಯುತ್ತವೆ. ಹಾಗಾಗಿ ಸಿಎಸ್‌ಆರ್ ಅನುದಾನವನ್ನು ಸ್ಥಳೀಯವಾಗಿ ಬಳಕೆ ಮಾಡಿ ಎಂದು ಹೇಳಿದರು.

ಸಿಎಸ್‌ಆರ್ ಅನುದಾನ ನೀಡಲು ಕಂಪನಿಗಳು ಮುಕ್ತವಾಗಿದ್ದು, ಸ್ವತಃ ಇಂಡಸ್ಟ್ರಿ ಕಂಪನಿಯವರೇ ತಮಗೆ ಇಷ್ಟವಾದ ಶಾಲೆಯನ್ನು ಆಯ್ಕೆ ಮಾಡಿಕೊಂಡು ತಮ್ಮದೇ ಶೈಲಿಯಲ್ಲಿ ಕಟ್ಟಡ ನಿರ್ಮಿಸಿ ಅಭಿವೃದ್ಧಿಗೆ ಮುಂದಾಗಬೇಕು ಎಂದರು.

ಸರ್ಕಾರ ನಿರಂತರವಾಗಿ ಉದ್ಯಮಗಳ ಅಭಿವೃದ್ಧಿಗೆ ಮತ್ತು ಸ್ಥಾಪನೆಗೆ ಅಗತ್ಯ ಸಹಕಾರ ನೀಡುತ್ತಾ ಬಂದಿದೆ ಹಾಗೂ ಕೈಗಾರಿಕೆಗಳ ಸ್ಥಾಪನೆಗೆ ಮತ್ತು ಚಾಲನೆಗೆ ಸರ್ಕಾರ ಪ್ರೋತ್ಸಾಹ ನೀಡುತ್ತದೆ. ಹಾಗೆಯೇ ಕೈಗಾರಿಕೆಗಳು ತಮ್ಮ ಸಿಎಸ್‌ಆರ್ ಅನುದಾನದ ಮೂಲಕ ಸಹಕಾರ ನೀಡಬೇಕು ಎಂದು ಹೇಳಿದರು.

> ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಮಾತನಾಡಿ, ಪ್ರತಿ ಇಂಡಸ್ಟ್ರಿಯ ಶೇಕಡಾ 2 ರಷ್ಟು ಸಿಎಸ್‌ಆರ್ ಅನುದಾನವನ್ನು ಸ್ಥಳೀಯ ಪ್ರಾಥಮಿಕ ಹಾಗೂ ಪ್ರೌಢಶಾಲಾ ಕಟ್ಟಡ ನಿರ್ಮಾಣಕ್ಕೆ ಮತ್ತು ಗುಣಮಟ್ಟದ ಶಿಕ್ಷಣಕ್ಕೆ ನೀಡುವಂತೆ ಕೋರಿದರು.

ಈಗಾಗಲೇ ಎಲ್ಲಾ ಇಂಡಸ್ಟ್ರಿ-ಕಂಪನಿಗಳು ತಮ್ಮ ಸಿಎಸ್‌ಆರ್ ಅನುದಾನದ ಮೂಲಕ ಸಾಮಾಜಿಕ ಕಾರ್ಯ ಮಾಡಿದ್ದೀರಿ. ಅದರ ಜೊತೆ ಇನ್ನಷ್ಟು ಉತ್ತಮ ಕಾರ್ಯವಾಗಲಿ ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ತಿಳಿಸಿದರು.

ಸಭೆಯಲ್ಲಿ ಕೈಗಾರಿಕಾ ಇಲಾಖೆಯ ಜಂಟಿ ನಿರ್ದೇಶಕ ಶಿವಪುತ್ರಪ್ಪ ಎಚ್., ಉಪನಿರ್ದೇಶಕ ವಿನಾಯಕ ಜೋಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಜಿ.ಎಲ್. ಬಾರಟಕ್ಕೆ, ಲೀಡ್ ಬ್ಯಾಂಕ್ ಮ್ಯಾನೇಜರ್ ಸಂತೋಷ್ ಸೇರಿದಂತೆ ಉದ್ದಿಮೆದಾರರು ಹಾಜರಿದ್ದರು.

### ಕೇಂದ್ರ ಸರಕಾರದ ಯೋಜನೆಗಳ ಜಾಗೃತಿ ಕಾರ್ಯಕ್ರಮದಲ್ಲಿ ಶಾಸಕ ಡಾ. ಚಂದ್ರು ಲಮಾಣಿ

# ಕೇಂದ್ರ ಸರ್ಕಾರದಿಂದ ಸಮರ್ಥ ಯೋಜನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಷ್ಟ್ರೀಯ ಯೋಜನೆಗಳು, ಆದ್ಯತೆಗಳು ಮತ್ತು ದೇಶದ ಗುರಿಗಳನ್ನು ರೂಪಿಸುವಲ್ಲಿ ದೇಶದ ಯುವಕರನ್ನು ಸಕ್ರಿಯವಾಗಿ ತೊಡಗಿಸಿಕೊಳ್ಳುವುದು ಪ್ರಧಾನಮಂತ್ರಿಗಳ ದೂರ ದೃಷ್ಟಿಯಾಗಿದ್ದು, ಈ ನಿಟ್ಟಿನಲ್ಲಿ ಕೇಂದ್ರ ಸಂವಹನ ಇಲಾಖೆ ವತಿಯಿಂದ ವಿಕಸಿತ ಭಾರತ-2047ರ ಮಾಹಿತಿಗಳನ್ನು ಜನರಿಗೆ ತಲುಪಿಸಲಾಗುತ್ತಿದೆ ಎಂದು ಶಾಸಕ ಡಾ.ಚಂದ್ರು ಲಮಾಣಿ ಹೇಳಿದರು.

ಅವರು ಬುಧವಾರ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದ ಆವರಣದಲ್ಲಿ ಕೇಂದ್ರ ಸಂವಹನ ಇಲಾಖೆ, ತಾಲೂಕಾಡಳಿತ, ತಾ.ಪಂ. ಶಿಶು ಅಭಿವೃದ್ಧಿ ಯೋಜನೆ, ಆರೋಗ್ಯ, ಕೃಷಿ, ತೋಟಗಾರಿಕೆ, ಪೊಲೀಸ್, ಶಿಕ್ಷಣ ಇಲಾಖೆ, ಪುರಸಭೆ ಹಾಗೂ ವಿವಿಧ ಶಾಲಾ-ಕಾಲೇಜುಗಳ ಸಂಯುಕ್ತಾಶ್ರಯದಲ್ಲಿ ಹೊಸ ಕ್ರಿಮಿನಲ್ ಕಾನೂನುಗಳು, ಪ್ರಧಾನಮಂತ್ರಿ ಸೂರ್ಯ ಘರ್ ಯೋಜನೆ, ವಿಕಸಿ ಭಾರತ ಬಜೆಟ್, ದೂರದೃಷ್ಟಿ-2047 ಏಕ್ ಭಾರತ ಶ್ರೇಷ್ಠ ಭಾರತ ಹಾಗೂ ಕೇಂದ್ರ ಸರಕಾರದ ವಿವಿಧ ಯೋಜನೆಗಳ ವಿಶೇಷ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರಧಾನಿ ಮೋದಿಯವರು ಪ್ರಥಮ ಬಾರಿಗೆ ಪ್ರಧಾನಿಯಾದ ಮೇಲೆ

> ಕರ್ನಾಟಕಕ್ಕೆ ಕೇಂದ್ರದ ಅನುದಾನದಲ್ಲಿ ಗಣನೀಯ ಹೆಚ್ಚಳವಾಗಿರುವದಾಗಿ ವಾರ್ತಾ ಇಲಾಖೆ ಮಾಹಿತಿ ನೀಡಿದೆ. 2014-24ರಲ್ಲಿ ತೆರಿಗೆ ಹಂಚಿಕೆಯಾಗಿದ್ದು 2,95,818 ಕೋಟಿ ರೂಗಳು. ಭಾರತ ಸರಕಾರದಿಂದ ಬಂದ ಅನುದಾನ 2,36,955 ಕೋಟಿ ರೂಗಳನ್ನು ಕೇಂದ್ರ ಸರಕಾರದಿಂದ ಕರ್ನಾಟಕಕ್ಕೆ ಹಂಚಿಕೆ ಮಾಡಿದೆ. ಈ ಭಾಗದಲ್ಲಿ ಐಐಟಿ, ಸ್ಮಾರ್ಟ್ ಸಿಟಿಯಾಗಿ 7 ನಗರಗಳನ್ನು ಆಯ್ಕೆ ಮಾಡಿರುವದು ಸೇರಿದಂತೆ ನೂರಾರು ಯೋಜನೆಗಳು ಕೇಂದ್ರ ಸರಕಾರದ ಕೊಡುಗೆಯಾಗಿದೆ ಎಂದು ಡಾ. ಚಂದ್ರು ಲಮಾಣಿ ತಿಳಿಸಿದರು.




ಕೆಂಪುಕೋಟೆಯ ಮೇಲೆ ಭಾಷಣ ಮಾಡುವ ಸಂದರ್ಭದಲ್ಲಿ ಪ್ರತಿಯೊಂದು ಮನೆಗೂ ಶೌಚಾಲಯಗಳನ್ನು ನಿರ್ಮಿಸಿಕೊಳ್ಳುವಂತೆ ಕರೆ ನೀಡಿರುವದನ್ನು ಅನೇಕರು ಟೀಕಿಸಿದ್ದರು. ಆದರೆ ಶೌಚಾಲಯವನ್ನು ನಿರ್ಮಿಸಿಕೊಳ್ಳುವದರಿಂದ ಪ್ರತಿಯೊಬ್ಬ ಮಹಿಳೆಯರ ಮಾನವನ್ನು ಕಾಪಾಡಿಕೊಳ್ಳುವ ಕಾರ್ಯವನ್ನು ಮಾಡುವ ಉದ್ದೇಶ ಅವರದ್ದಾಗಿತ್ತು. ಕೇಂದ್ರ ಸರಕಾರದ ಯೋಜನೆಗಳು ಮನೆ ಮನೆಗೆ ಮುಟ್ಟಿವೆ ಎಂದರು.

ತಹಸೀಲ್ದಾರ ವಾಸುದೇವ ಸ್ವಾಮಿ ಮಾತನಾಡಿದರು. ಸಂಪನ್ಮೂಲ ವ್ಯಕ್ತಿ, ವಕೀಲರ ಸಂಘದ ಅಧ್ಯಕ್ಷ ಬಿ.ಎಸ್. ಬಾಳೇಶ್ವರಮಠ ಉಪನ್ಯಾಸ ನೀಡಿದರು. ಅತಿಥಿಗಳಾಗಿ ತಾ.ಪಂ ಇಓ ಕೃಷ್ಣಪ್ಪ ಧರ್ಮರ, ತಾಲೂಕಾ ವೈದ್ಯಾಧಿಕಾರಿ ಡಾ.ಸುಭಾಸ ದಾಯಗೊಂಡ, ಡಾ. ಶ್ರೀಕಾಂತ ಕಾಟೇವಾಲೆ, ಕೃಷಿ ಇಲಾಖೆ ಸಹಾಯಕ ನಿರ್ದೇಶಕ ರೇವಣಪ್ಪ ಮನಗೂಳಿ, ತೋಟಗಾರಿಕೆ ಸಹಾಯಕ ನಿರ್ದೇಶಕ ರಮೇಶ ಹಾವರಡ್ಡಿ, ಪುರಸಭೆ ಸದಸ್ಯರಾದ ಅಶ್ವಿನಿ ಅಂಕಲಕೋಟಿ, ಪೂರ್ಣಿಮಾ ಪಾಟೀಲ, ಕವಿತಾ ಶರಸೂರಿ, ಪೂಜಾ ಖರಾಟೆ, ವಾಣಿ ಹತ್ತಿ, ಮಹಾದೇವಪ್ಪ ಅಣ್ಣಿಗೇರಿ, ಕ್ಷೇತ್ರ ಪ್ರಚಾರಕರಾದ ಜಿ.ತುಕಾರಾಮಗೌಡ ಹಾಗೂ ಶಿರಸ್ತೇದಾರ ಮನಿಯಾರ, ಮುರುಳೀಧರ ಕಾರಭಾರಿ, ಕ್ಷೇತ್ರ ಪ್ರಚಾರಕರಾದ ಜಿ.ತುಕಾರಾಮಗೌಡ, ಕಾರ್ಯಕ್ರಮ ಸಂಯೋಜಕ ಮುರುಳೀಧರ ಕಾರಭಾರಿ, ಎಡಿಸಿಡಿಪಿಓ ಅನ್ನಪೂರ್ಣ ಹಳ್ಳಿಗುಡಿ ಮುಂತಾದವರಿದ್ದರು.

## ಸಂಪಾದಕೀಯ

# ಲೋಕಸಭೆಗೆ ರಾಜ್ಯಸಭೆ ಬಲ

ಕೇಂದ್ರದಲ್ಲಿ ಬಿಜೆಪಿ ಸತತ 3ನೇ ಬಾರಿಗೆ ಅಧಿಕಾರದ ಗದ್ದುಗೆ ಹಿಡಿದಿದೆ. ನರೇಂದ್ರ ಮೋದಿ 3ನೇ ಬಾರಿಗೆ ಪ್ರಧಾನ ಮಂತ್ರಿಯಾಗಿ ಅಧಿಕಾರ ನಡೆಸುತ್ತಿದ್ದಾರೆ. ದೇಶದ ಅನೇಕ ರಾಜ್ಯಗಳಲ್ಲಿ ಬಿಜೆಪಿ ಅಧಿಕಾರದಲ್ಲಿದೆ. ಆದರೂ ಕೆಲ ಮಸೂದೆಗಳನ್ನು ಜಾರಿಗೊಳಿಸಲು ಸಾಧ್ಯವಾಗದೆ ಪರಿತಪಿಸುವಂಥ ಪರಿಸ್ಥಿತಿ ಇತ್ತು. ಆದರೆ ಆ ಸಮಸ್ಯೆ ಸಧ್ಯಕ್ಕೆ ನಿವಾರಣೆಯಾದಂತಾಗಿದೆ.

ಆ ಸಮಸ್ಯೆಯ ಹೆಸರು ರಾಜ್ಯಸಭೆ. 10 ವರ್ಷಗಳಿಂದ ಕೇಂದ್ರದಲ್ಲಿ ಬಿಜೆಪಿ ಅಧಿಕಾರದಲ್ಲಿತ್ತು. ಕಳೆದ ಅವಧಿಯಲ್ಲಿ ಬಿಜೆಪಿ ಅತಿ ದೊಡ್ಡ ಪಕ್ಷವಾಗಿ ಹೊರಹೊಮ್ಮಿತ್ತು. ಈ ಬಾರಿ ಮೈತ್ರಿ ಅನಿವಾರ್ಯವಾಗಿದೆ. ಆದರೆ 10 ವರ್ಷದಿಂದ ರಾಜ್ಯಸಭೆಯಲ್ಲಿ ಬಿಜೆಪಿಗೆ ಬಹುಮತ ಇದ್ದಿಲ್ಲ. ಆ ಕಾರಣಕ್ಕಾಗಿ ಲೋಕಸಭೆಯಲ್ಲಿ ಪಾಸ್ ಆಗುವ ಮಸೂದೆಗಳು ರಾಜ್ಯಸಭೆಯಲ್ಲಿ ಪಾಸ್ ಆಗುತ್ತಿದ್ದಿಲ್ಲ. ಇದರಿಂದ ಬಿಜೆಪಿ ತಾನು ಅಂದುಕೊಂಡ ಮಸೂದೆ ಜಾರಿಗೊಳಿಸದೆ ಅಡಕತ್ತರಿಯಲ್ಲಿ ಸಿಲುಕಿಕೊಂಡಿತ್ತು.


ಆದರೆ ಈಗ ರಾಜ್ಯಸಭೆಯಲ್ಲೂ ಬಿಜೆಪಿ ಅಥವಾ ಎನ್ ಡಿಎ ಮೈತ್ರಿಕೂಟ ಬಹುಮತ ಪಡೆದಿದ್ದು, ಇನ್ನು ಪ್ರಧಾನಿ ನರೇಂದ್ರ ಮೋದಿ ತೆಗೆದುಕೊಳ್ಳುವ ನಿರ್ಧಾರ, ಮಂಡಿಸುವ ಮಸೂದೆಗಳು ಸುಲಭವಾಗಿ ಕಾನೂನುಗಳಾಗಿ ಬದಲಾಗುವುದು ನಿಶ್ಚಿತ ಎನ್ನುವ ವಾತಾವರಣ ಸೃಷ್ಟಿಯಾಗಿದೆ.

ರಾಜ್ಯಸಭೆ ಒಟ್ಟು ಸದಸ್ಯರ ಸಂಖ್ಯೆ 245. ಆದರೆ 8 ಸ್ಥಾನ ಖಾಲಿ ಇರುವುದರಿಂದ ಆ ಸಂಖ್ಯೆ 237ಕ್ಕೆ ಕುಸಿದಿದೆ. ಬಹುಮತಕ್ಕೆ 119 ಸ್ಥಾನ ಬೇಕು. ಹೊಸದಾಗಿ 11 ಜನ ಬಿಜೆಪಿ ಸದಸ್ಯರು ಸೇರ್ಪಡೆಗೊಂಡಿದ್ದರಿಂದ ರಾಜ್ಯಸಭೆಯಲ್ಲಿ ಎನ್ ಡಿಎ ಬಲ 121ಕ್ಕೆ ಏರಿಕೆಯಾಗಿದೆ. ಹೀಗಾಗಿ ಲೋಕಸಭೆಯಲ್ಲಿ ಯಾವುದೇ ಮಸೂದೆ ಮಂಡನೆಯಾದರೂ ಅದು ರಾಜ್ಯಸಭೆಯಲ್ಲೂ ಪಾಸ್ ಆಗುವುದರಲ್ಲಿ ಅನುಮಾನವಿಲ್ಲ.

ಈ ಲೆಕ್ಕಾಚಾರ ಆಧರಿಸಿ ಕೇಂದ್ರ ಸರಕಾರ ಮುಂದಿನ ಅಧಿವೇಶನದಲ್ಲಿ ಅನೇಕ ಪ್ರಮುಖ ನಿರ್ಣಯಗಳನ್ನು ಕೈಗೊಳ್ಳುವ ಸಾಧ್ಯತೆಯಿದೆ. ಪ್ರಮುಖವಾಗಿ ಒಂದೇ ದೇಶ ಒಂದು ಚುನಾವಣೆ ಸಹಿತ ಈ ಹಿಂದಿನ ಅವಧಿಯಲ್ಲಿ ಲೋಕಸಭೆಯಲ್ಲಿ ಮಂಡನೆಯಾದ ಮಸೂದೆಗಳು ಮತ್ತೊಮ್ಮೆ ಮುನ್ನಲೆಗೆ ಬರುವ ಸಾಧ್ಯತೆಯಿದೆ. ಒಂದೊಮ್ಮೆ ಕೇಂದ್ರ ಸರಕಾರ ಈ ಹಿಂದಿನ ವಿವಾದಿತ ಮಸೂದೆ ಮಂಡನೆಗೆ ಮುಂದಾದರೆ ದೇಶಾದ್ಯಂತ ಸಾಕಷ್ಟು ಚರ್ಚೆಗಳನ್ನು ಹುಟ್ಟುಹಾಕಲಿದೆ.

## ನರೇಗಲ್ಲ ಬೀಚಿ ಬಳಗದ ದಶಮಾನ ಸಂಭ್ರಮದ ಸಂಸ್ಮರಣ ಗ್ರಂಥ ಪರಿಚಯ

# ಬೀಚಿ ಕುರಿತ ಆಕರ ಗ್ರಂಥ 'ಹಾಸ್ಯಬ್ರಹ್ಮ ಬೀಚಿ'




ಪ್ರಧಾನ ಸಂಪಾದಕರು:
ಡಾ. ಎಸ್.ಜಿ. ಗುರಿಕಾರ.
ಸಂಪಾದಕರು:
ಡಾ ಕಲ್ಲಯ್ಯ ಎಸ್.ಹಿರೇಮಠ.
ಪ್ರಕಾಶಕರು:
ಬೀಚಿ ಬಳಗ ದಶಮಾನೋತ್ಸವ ಸಮಿತಿ,
ನರೇಗಲ್.
ಪುಟಗಳು: 252, ಬೆಲೆ: 250ರೂ.

ನರೇಗಲ್ ಪಟ್ಟಣದಲ್ಲಿ 2013 ಡಿಸೆಂಬರ್ 7ರಂದು 'ಬೀಚಿ ಬಳಗ' ಎಂಬ ಒಂದು ಸಾಹಿತ್ತಿಕ ಸಂಘಟನೆ ಅಸ್ತಿತ್ವಕ್ಕೆ ಬಂದಿತು. ಈ ಬಳಗವು 2023ರ ಡಿಸೆಂಬರ್ 10ರಂದು ತನ್ನ ದಶವಾರ್ಷಿಕೋತ್ಸವ ಸಮಾರಂಭವನ್ನು ಕನ್ನಡದ ಪೂಜಾರಿ ಹಿರೇಮಗಳೂರು ಕಣ್ಣನ್, ಅಭಿನವ ಬೀಚಿ ಗಂಗಾವತಿ ಪ್ರಾಣೇಶ್, ಹಾಸ್ಯ ದಿಗ್ಗಜರಾದ ಬಸವರಾಜ ಮಹಾಮನಿ, ನರಸಿಂಹ ಜೋಷಿ ಮತ್ತು ಅನಿಲ ವೈದ್ಯರ ನೇತೃತ್ವದಲ್ಲಿ ಆಚರಿಸಿಕೊಂಡಿತು.

ಈ ಸಂದರ್ಭದಲ್ಲಿ ಬೀಚಿ ಬಳಗವು 'ಹಾಸ್ಯ ಬ್ರಹ್ಮ ಬೀಚಿ' ಎಂಬ ಸಂಸ್ಮರಣಾ ಗ್ರಂಥವೊಂದನ್ನು ಹೊರ ತಂದಿದ್ದು, ಬೀಚಿಯವರನ್ನು ಇನ್ನಷ್ಟು ಅರಿಯಲು ಇದೊಂದು ಆಕರ ಗ್ರಂಥವಾಗಿದೆ.

ಪುಸ್ತಕದ ಪುಟಗಳನ್ನು ತೆರೆಯುತ್ತ ಹೋದಂತೆ ಮೊದಲು 'ಬೀಚಿ ಬಳಗ ನಡೆದು ಬಂದ ದಾರಿ' ಎಂಬ ಲೇಖನ ನರೇಗಲ್ಲದಲ್ಲಿ ಬೀಚಿ ಬಳಗ ಜನನ ತಾಳಿದ ವಿವರಣೆಯನ್ನು ನೀಡುತ್ತದೆ. ಈ ಗ್ರಂಥದಲ್ಲಿ ದೊಡ್ಡಯ್ಯ ಅರವಟಗಿಮ ಠರ 'ಬಳ್ಳಾರಿ ಬೀಚಿ' ಲೇಖನವು ಬೀಚಿಯವರ ಸಮಗ್ರ ಜೀವನವನ್ನು ಸಂಕ್ಷಿಪ್ತದಲ್ಲಿ ತೆರೆದಿಡುತ್ತದೆ. ಎಂ ಎಸ್. ದಢೇಸೂರಮಠ ಅವರ ಕೃತಿ ಅವಲೋಕನ 'ಸಕ್ಕರೆ ಮೂಟೆ' ಬೀಚಿಯವರ ಸಕ್ಕರೆ ಮೂಟೆ ಕೃತಿಯನ್ನು ಪರಿಚಯಿಸುತ್ತದೆ.

ಹಾಸ್ಯ ದಿಗ್ಗಜ ಗಂಗಾವತಿ ಪ್ರಾಣೇಶ್‌ರ ಲೇಖನ 'ಸ್ಮರಣೀಯ ಬೀಚಿ ಬಳಗ' ಬಳಗದ ಒಡನಾಡಿಗಳೊಂದಿಗೆ ತಾವು ಕಳೆದ ರಸಮಯ ನಿಮಿಷಗಳ ವಿವರಣೆ ಕೊಡುತ್ತದೆ. ಬೀಚಿ ಬಳಗದ ಸದ್ಯದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ ಅವರ ಬೀಚಿ ಬಳಗ ಬಳಗದ ಪ್ರಸ್ತುತ ಕಾರ್ಯಗಳನ್ನು ವಿವರಿಸಿದೆ. ಬಸವರಾಜ ಮಹಾಮನಿಯವರ 'ನರೇಗಲ್ಲಿಗೆ ನಾ ಕುಣಕೊಂತ ಬರ್ತಿನಿ" ಎಂಬ ಲೇಖನದಲ್ಲಿ ಸ್ವಾಸ್ಯಕರವಾಗಿ ವರ್ಣಿಸಿದ್ದಾರೆ. ನಗೆ ಮಾತುಗಾರ ಪ್ರೊ. ಅನಿಲ ವೈದ್ಯ ಬೀಚಿಯವರ ವ್ಯಕ್ತಿ ಪರಿಚಯವನ್ನು ಸುಂದರವಾಗಿ ಕಟ್ಟಿಕೊಟ್ಟಿದ್ದಾರೆ. ಎಂ.ವಿ. ವೀರಾಪೂರ ಅವರ 'ನರೇಗಲ್ಲ ಬೀಚಿ ಬಳಗ' ಲೇಖನವು ಬೀಚಿ ಬಳಗ ಕಳೆದ ಹತ್ತು ವರ್ಷಗಳಿಂದ ಸಾಗಿ ಬಂದಿರುವ ಮಹತ್ವದ ಘಟನೆಗಳನ್ನು ವಿವರಿಸುತ್ತದೆ.

ಡಾ. ಕಲ್ಲಯ್ಯ ಹಿರೇಮಠ ಬೀಚಿಯವರ 'ಬೆಂಗಳೂರು ಬಸ್ಸು' ಕೃತಿ ಅವಲೋಕನ ಮಾಡಿದ್ದಾರೆ. ಹಿರಿಯ ಸಾಹಿತಿ ಡಾ. ಬಸವರಾಜ ಜಗಜಂಪಿಯವರ 'ಕನ್ನಡಕ್ಕೊಬ್ಬರೇ ಬೀಚಿ' ಲೇಖನ ಕನ್ನಡ ಹಾಸ್ಯ ಸಾಹಿತ್ಯಕ್ಕೆ ಬೀಚಿಯವರೊಬ್ಬರೇ ಸಾರ್ವಭೌಮರು ಎಂಬುದನ್ನು ತಿಳಿಸುತ್ತದೆ. ಶಿವಯೋಗಿ ಜಕ್ಕಲಿ 'ಉತ್ತರ ಭೂಪ ಬೀಚಿ' ಕುರಿತಾಗಿ ಬರೆದಿದ್ದಾರೆ.

ಹಿರಿಯ ಶಿಕ್ಷಕ ಎಂ.ಎ. ಹಿರೆವಡೆಯರ 'ಬೀಚಿ ಸಾಹಿತ್ಯ ವಿವೇಚನೆ'ಯನ್ನು ಮಾಡಿದ್ದು, ಅನೇಕ ಮಹತ್ವದ ಅಂಶಗಳು ಲೇಖನದಲ್ಲಿವೆ. ಪ್ರೊ. ಶಕುಂತಲಾ ಬರಗಿ ಬೀಚಿಯವರ ಕೃತಿ 'ತಿಮ್ಮದರ್ಶನ'ದ ಅವಲೋಕನೆ ಮಾಡಿದ್ದಾರೆ. ಭಾರತಿ ಮೂಲಿಮನಿ 'ನಾ ಕಂಡ ದಾರ್ಶನಿಕ ಬೀಚಿ', ಬೆಳಗಾವಿಯ ಗುಂಡೇನಟ್ಟಿ ಮಧುಕರ ಬೀಚಿಯವರು ತಮಗೆ ಬರೆದ ಕೊನೆಯ ಕಾಗದದ ನೆನಪನ್ನು ಹಂಚಿಕೊಂಡಿದ್ದಾರೆ. 'ಬೀಚಿ ನೂರೊಂದು ಉವಾಚ' ಲೇಖನವನ್ನು ಪೃಥ್ವಿರಾಜ ಕುಲಕರ್ಣಿ ಸಂಗ್ರಹಿಸಿಕೊಟ್ಟಿದ್ದಾರೆ. ದ್ರಾಕ್ಷಾಯಣಿ ಅರವಟಗಿಮಠ ಬೀಚಿ ತಮ್ಮ ಹೆಸರನ್ನು ಬರೆದ ರೀತಿಯಲ್ಲಿಯೇ ಕನ್ನಡ-ಇಂಗ್ಲೀಷ್ ಎರಡನ್ನೂ ಬಳಸಿ 'ಇದನ್ನು ಓದಿ ನೋಡಿ' ಲೇಖನ ಬರೆದಿದ್ದಾರೆ. ಓಂಕಾರೇಶ್ವರಿ 'ಬೀಚಿ ಅಂದ್ರೆ ಸುಮ್ನೇನಾ?' ಲೇಖನದಲ್ಲಿ ಬೀಚಿಯವರ ಜೀವನದಲ್ಲಿ ನಡೆದ ಅನೇಕ ಹಾಸ್ಯ ಪ್ರಸಂಗಗಳ ಗಂಟನ್ನು ಕಟ್ಟಿಕೊಟ್ಟಿದ್ದಾರೆ.

ಬೀಚಿ ಬಳಗದ ವಾರ್ಷಿಕ ಚಟುವಟಿಕೆಗಳನ್ನು ಸುರೇಶ ಹಳ್ಳಿಕೇರಿ ನಿರೂಪಿಸಿದ್ದಾರೆ. ಸಂಗಮೇಶ ಹೂಲಗೇರಿ ಬಳಗದ ಕಾರ್ಯ ವೈಖರಿಗಳ ವಿವರಣೆ ನೀಡಿದ್ದಾರೆ.

ಬೆಳಗಾವಿಯ ಹಿರಿಯ ಲೇಖಕ ಎಲ್.ಎಸ್. ಶಾಸ್ತ್ರಿ, ಡಿ.ಎ. ಅರವಟಗಿಮಠರ, ಶಾಂತಗೌಡ ಮರಿಗೌಡರ, ಆದರ್ಶ ಕುಲಕರ್ಣಿ ಬೀಚಿಯವರ ಕುರಿತು ಸ್ವಾರಸ್ಯಕರ ಲೇಖನಗಳನ್ನು ಒದಗಿಸಿದ್ದಾರೆ.

ಈ ಸಂಸ್ಮರಣ ಗ್ರಂಥವನ್ನು ಮತ್ತಷ್ಟು ಚಂದಗೊಳಿಸುವಲ್ಲಿ ಕನ್ನಡದ ಪೂಜಾರಿ ಹಿರೇಮಗಳೂರು ಕಣ್ಣನ್, ನಾಗಶ್ರೀ ತ್ಯಾಗರಾಜ್, ಡಾ. ಆರ್.ಕೆ. ಗಚ್ಚಿನಮಠ, ದತ್ತಪ್ರಸನ್ನ ಪಾಟೀಲ, ಶ್ವೇತಾ ಕೊಟಗಿ, ನಿರ್ಮಲಾ ಮೃತ್ಯುಂಜಯಸ್ವಾಮಿ, ರಾಜೇಶ್ವರಿ ಹೆಗಡೆ, ಹುಚ್ಚೀರಪ್ಪ ಈಟಿ, ಈಶ್ವರ ಬೆಟಗೇರಿ, ಶಿವಕುಮಾರ ನಿಡಗುಂದಿ, ಅಚ್ಯುತಾನುಭವ ಅಮೃತವಾಣಿ, ನಿರ್ಮಲಾ ಹಿರೇಮಠರವರ ಲೇಖನಗಳು, ಹಾಸ್ಯ ಬರೆಹಗಳು ಕೃತಿಯ ಸೌಂದರ್ಯವನ್ನು ಹೆಚ್ಚಿಸಿವೆ. ಇತರೆ 35 ಜನ ಲೇಖಕರು ಬೀಚಿಯವರ ಬಗ್ಗೆ ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದ್ದಾರೆ.

ಕವನಗಳ ವಿಭಾಗದಲ್ಲಿ ಶಿವಲೀಲಾ ಸೋಮಗೊಂಡ, ಬಸವರಾಜ ಪಾಟೀಲ, ಜೆ.ಎ. ಪಾಟೀಲ, ಅಕ್ಕಮಹಾದೇವಿ ಕಮತ, ಶಕುಂತಲಾ ಸಿಂಧೂರ, ಶ್ರೀಕಾಂತಯ್ಯಮಠ, ಈರಣ್ಣ ಹೂಗಾರ, ಎಂ.ಕೆ. ಬೇವಿನಕಟ್ಟಿ, ಶಿವಾನಂದ ಗೋಗೇರಿಯವರ ಕವನಗಳ ಸವಿಯನ್ನು ಓದಿಯೇ ಅನುಭವಿಸಬೇಕು.

ಒಟ್ಟಿನಲ್ಲಿ ಈ ಗ್ರಂಥ ಬೀಚಿಯವರನ್ನು ತಿಳಿಯಲು ಎಲ್ಲರಿಗೂ ಸಹಾಯ ಮಾಡುತ್ತದೆ. ಈ ಗ್ರಂಥವನ್ನು ಓದಬೇಕೆಂಬ ಮನಸ್ಸಾದರೆ ನರೇಗಲ್ಲ ಬೀಚಿ ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ- ಮೊ. 9448264933 ಅವರನ್ನು ಸಂಪರ್ಕಿಸಿ ಸೂಕ್ತ ಮೌಲ್ಯವನ್ನು ನೀಡಿ ಪಡೆಯಬಹುದು.

**- ಅರುಣ ಬಿ. ಕುಲಕರ್ಣಿ.**
ನರೇಗಲ್ಲ-ಕೋಡಿಕೊಪ್ಪ.

# ಮೇಜರ್ ಧ್ಯಾನಚಂದರವರ ಜನ್ಮದಿನ ಹಿನ್ನೆಲೆ: ಇಂದು ಹಾಕಿ ಪಂದ್ಯಾವಳಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಗದಗ ಇವರ ಸಹಯೋಗದಲ್ಲಿ ಮೇಜರ್ ಧ್ಯಾನಚಂದರವರ ಜನ್ಮದಿನದ ಅಂಗವಾಗಿ ರಾಷ್ಟ್ರೀಯ ಕ್ರೀಡಾ ದಿನಾಚರಣೆ ನಿಮಿತ್ತ ಹಾಕಿ ಪಂದ್ಯಾವಳಿಯನ್ನು ಆಗಸ್ಟ್ 29 ರಂದು ಬೆಳಿಗ್ಗೆ 10 ಗಂಟೆಗೆ ಬೆಟಗೇರಿಯ ಮಹಾತ್ಮಾ ಗಾಂಧಿ ಹಾಕಿ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಮುಖ್ಯಮಂತ್ರಿ ಸಿದ್ಧರಾಮಯ್ಯ ಹಾಗೂ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಹಾಕಿ ಕ್ರೀಡಾಕೂಟಕ್ಕೆ ಚಾಲನೆ ನೀಡುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಬಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರಾದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ಶಾಸಕರಾದ ಸಿ.ಸಿ.ಪಾಟೀಲ, ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಚಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಡಾ.ಮಂಜುನಾಥ್ ಪ್ರಸಾದ್, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆಯ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ ಚೌಧರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತರಾದ ಚೇತನ್ ಆರ್ ಆಗಮಿಸುವರು.

ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಶರಣು ಗೋಗೇರಿ ಸ್ವಾಗತ ಕೋರಿದ್ದಾರೆ.

ಕ್ರೀಡಾ ಜ್ಯೋತಿ ಮೆರವಣಿಗೆಯು ಆಗಸ್ಟ್ 29 ರಂದು ಬೆಳಿಗ್ಗೆ 8 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಿಂದ ಭೂಮರೆಡ್ಡಿ ವೃತ್ತ (ಪುಟ್ಟರಾಜ ವೃತ್ತ , ರೋಟರಿ ವೃತ್ತ, ಮಹಾತ್ಮಗಾಂಧಿ ವೃತ್ತ, ಸಹಸ್ರಾರ್ಜುನ ವೃತ್ತ, ಹನುಮಂತ ದೇವಸ್ಥಾನ ಮೂಲಕ ಮಹಾತ್ಮ ಗಾಂಧಿ ಹಾಕಿ ಕ್ರೀಡಾಂಗಣಕ್ಕೆ ಆಗಮಿಸುವುದು. ಆಗಸ್ಟ್ 29 ರಂದು ಬೆಳಿಗ್ಗೆ 10 ಗಂಟೆಗೆ ಬೆಟಗೇರಿಯ ಮಹಾತ್ಮ ಗಾಂಧಿ ಹಾಕಿ ಕ್ರೀಡಾಂಗಣದಲ್ಲಿ ಹಾಕಿ ಪಂದ್ಯಾವಳಿ ಜರುಗಲಿದೆ. ಆಗಸ್ಟ್ 30ರಂದು ಶುಕ್ರವಾರ ಸಂಜೆ 6 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದ ಕುಸ್ತಿ ಮನೆಯಲ್ಲಿ ಆರೋಗ್ಯ ಮತ್ತು ನೈರ್ಮಲ್ಯ ಕುರಿತು ಉಪನ್ಯಾಸ ಜರುಗಲಿದೆ.

# ಅಥ್ಲೆಟಿಕ್ ಕ್ರೀಡಾಪಟುಗಳ ಆಯ್ಕೆ ಸೆ.1ಕ್ಕೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಅಥ್ಲೆಟಿಕ್ ಅಸೋಸಿಯೇಶನ್ ಬೆಂಗಳೂರು ಹಾಗೂ ಮೈಸೂರು ಜಿಲ್ಲಾ ಅಥ್ಲೆಟಿಕ್ ಅಸೋಸಿಯೇಶನ್ ಇವರ ಸಂಯುಕ್ತ ಆಶ್ರಯದಲ್ಲಿ ಸೆಪ್ಟೆಂಬರ್ 14ರಿಂದ 17ರವರೆಗೆ ಮೈಸೂರು ನಗರದ ಚಾಮುಂಡಿ ಕ್ರೀಡಾಂಗಣದಲ್ಲಿ ಜರುಗಲಿರುವ ರಾಜ್ಯಮಟ್ಟದ ಅಥ್ಲೆಟಿಕ್ ಕ್ರೀಡಾಕೂಟಕ್ಕೆ ಗದಗ ಜಿಲ್ಲೆಯಿಂದ ಭಾಗವಹಿಸುವ ಕ್ರೀಡಾಪಟುಗಳ ಆಯ್ಕೆ ಪ್ರಕ್ರಿಯೆ ಸೆ.1ರಂದು ನಡೆಯಲಿದೆ.

ಗದಗ ಜಿಲ್ಲೆಯಿಂದ ಈ ಕ್ರೀಡಾಕೂಟಕ್ಕೆ ಭಾಗವಹಿಸುವ 14ರಿಂದ 23 ವಯೋಮಿತಿಯ ಬಾಲಕ ಮತ್ತು ಬಾಲಕಿಯರು ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಸೆ. 1ರಂದು ಬೆಳಿಗ್ಗೆ 9 ಗಂಟೆಗೆ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಲು ಗದಗ ಜಿಲ್ಲಾ ಅಥ್ಲೆಟಿಕ್ ಅಸೋಸಿಯೇಶನ್ ಕಾರ್ಯದರ್ಶಿ ವೆಂಕಟೇಶ ಕಟ್ಟಿಮನಿ ಪತ್ರಿಕಾ ಪ್ರಕಟನೆಯ ಮೂಲಕ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಪ್ರಭು ಪಾಟೀಲ ಮೊ-9538045321, ರಿಚರ್ಡ ಎಂ.ಡಿ.-9986554630, ಸಿ.ಪಾಟೀಲ-7619506413 ಇವರನ್ನು ಸಂಪರ್ಕಿಸಲು ಕೋರಲಾಗಿದೆ.

# ರಾಜಭವನದ ಜೊತೆಗೆ ರಾಷ್ಟ್ರಪತಿ ಭವನ ಚಲೋ ಕೂಡ ಮಾಡಲಿ: ಹೆಚ್.ಡಿ.ಕುಮಾರಸ್ವಾಮಿ

**■ ವಿಜಯಸಾಕ್ಷಿ ಸುದ್ದಿ, ಮಂಡ್ಯ**

ಕಾಂಗ್ರೆಸ್ ನಾಯಕರು 30ನೇ ತಾರೀಖು ರಾಜಭವನ ಚಲೋ ಮಾಡುತ್ತಿರುವುದಕ್ಕೆ ಬಹಳ ಸಂತೋಷ. ಅವರು ರಾಜಭವನದ ಜೊತೆಗೆ ರಾಷ್ಟಪತಿ ಭವನ ಚಲೋ ಕೂಡ ಮಾಡಲಿ. ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಮನೆಗೆ ಕೂಡ ಹೋಗಲಿ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಹೇಳಿದರು.

ಮಂಡ್ಯ ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷ ಚುನಾವಣೆ ಪ್ರಕ್ರಿಯೆ ಮುಗಿದ ನಂತರ ಸಚಿವರು ಮಾಧ್ಯಮಗಳ ಜತೆ ಮಾತನಾಡಿದರು.

ಕಾಂಗ್ರೆಸ್ ನಾಯಕರು 30ನೇ ತಾರೀಖು ರಾಜಭವನ ಚಲೋ ಮಾಡುತ್ತಿರುವುದಕ್ಕೆ ಬಹಳ ಸಂತೋಷ. ಅವರು ರಾಜಭವನದ ಜೊತೆಗೆ ರಾಷ್ಟಪತಿ ಭವನ ಚಲೋ ಕೂಡ ಮಾಡಲಿ. ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಮನೆಗೆ ಕೂಡ ಹೋಗಲಿ. ಸತ್ತಿರುವ ವಿಚಾರ ಇಟ್ಟುಕೊಂಡು ನನ್ನ ಬಗ್ಗೆ ಮಾತನಾಡುತ್ತಿದ್ದಾರೆ. ಮಹಾನ್ ಅಪರಾಧ ಮಾಡಿದ್ದಾರೆ ಎನ್ನುತ್ತಿದ್ದಾರೆ. ನಾನೇ ಕೈ ಜೋಡಿಸಿ ಮನವಿ ಮಾಡುತ್ತೇನೆ. ರಾಜ್ಯಪಾಲರ ಅನುಮತಿ ಪಡೆದು ತನಿಖೆ ಮಾಡಲಿ ಎಂದು ಸಚಿವರು ಸವಾಲು ಹಾಕಿದರು. ಇನ್ನೂ ಮಂತ್ರಿಗಳ ಲೆಟರ್ ಪ್ಯಾಡ್ ನಲ್ಲಿ ಈ ಜನ ಏನೆಲ್ಲಾ ದುರುಪಯೋಗ ಪಡಿಸಿಕೊಂಡಿದ್ದಾರೆ ಎನ್ನುವ ಮಾಹಿತಿ ಎಲ್ಲರಿಗೂ ಇದೆ. ಮುಡಾ ದಾಖಲೆಗಳಲ್ಲಿ ಸಹಿ ವ್ಯತ್ಯಾಸ ಜನ ಮಾತನಾಡುತ್ತಿದ್ದಾರೆ. ಈ ಹಗರಣದಲ್ಲಿ ಆಗಿರುವ ಬೆಳವಣಿಗೆ ಬಗ್ಗೆ ಟಾರ್ಚ್ ಹಾಕಿ ನೋಡಿದರೂ ಅಷ್ಟೇ, ಹಾಕದೇ ನೋಡಿದರೂ ಅಷ್ಟೇ. ಅದು ಸರ್ಕಾರಿ ಭೂಮಿ. ಸರ್ಕಾರಿ ಭೂಮಿ ಲಪಟಾಯಿಸಿ ಮುಡಾ ಸೈಟ್ ಪಡೆದಿದ್ದಾರೆ. ಇದಕ್ಕೆ ಉತ್ತರ ಕೊಡಲಿ ಎಂದು ಅವರು ಒತ್ತಾಯ ಮಾಡಿದರು.

## ಅಖಿಲ ಭಾರತ ವೀರಶೈವ ಮಹಾಸಭಾದ ರಾಜ್ಯ ಚುನಾವಣೆ

# ಸಂಗನಗೌಡ ಪಾಟೀಲ ಸೇರಿ 27 ಜನರ ಆಯ್ಕೆ

**■ ವಿಜಯಸಾಕ್ಷಿ ಸುದ್ದಿ, ಗದಗ**



ಅಖಿಲ ಭಾರತ ವೀರಶೈವ ಮಹಾಸಭಾದ ರಾಜ್ಯ ಕಾರ್ಯನಿರ್ವಾಹಕ ಸಮಿತಿ ಸಾಮಾನ್ಯ ಸದಸ್ಯ ಸ್ಥಾನಕ್ಕೆ ಜರುಗಿದ ಚುನಾವಣೆಯಲ್ಲಿ ಗದಗ ಜಿಲ್ಲೆಯ ರೋಣ ತಾಲೂಕಿನ ಯುವ ಧುರೀಣ ಸಂಗನಗೌಡ (ಮಿಥುನ) ಜಿ.ಪಾಟೀಲ ಸೇರಿದಂತೆ 27 ಅಭ್ಯರ್ಥಿಗಳು ಹೆಚ್ಚಿನ ಮತಗಳನ್ನು ಪಡೆದುಕೊಂಡು ಆಯ್ಕೆಯಾಗಿದ್ದಾರೆ.

ಒಟ್ಟು 27 ಸ್ಥಾನಕ್ಕೆ ರಾಜ್ಯದಾದ್ಯಂತ ಎಲ್ಲ ಜಿಲ್ಲಾ ಕೇಂದ್ರಗಳಿಂದ ಒಟ್ಟು 57 ಅರ್ಭ್ಯರ್ಥಿಗಳು ಆಯ್ಕೆಗಾಗಿ ಚುನಾವಣಾ ಕಣದಲ್ಲಿದ್ದರು. ಆ. 25ರಂದು ಮತದಾನ ಜರುಗಿ-ತು. ರಾಜ್ಯದ ಎಲ್ಲ ಜಿಲ್ಲೆಗಳಿಂದ 57 ಅಭ್ಯರ್ಥಿಗಳು ಪಡೆದುಕೊಂಡ ಮತಗಳನ್ನು ಎಣಿಕೆ ಮಾಡಿ ಬೆಂಗಳೂರಿನ ಮಹಾಸಭಾದ ಚುನಾವಣಾ ಕೇಂದ್ರಕ್ಕೆ ಜಿಲ್ಲಾ ಚುನಾವಣಾಧಿಕಗಳು ಮಾಹಿತಿಯನ್ನು ರವಾನಿಸಿದ್ದರು. ರಾಜ್ಯದ ಎಲ್ಲ ಜಿಲ್ಲಾ ಕೇಂದ್ರಗಳಿಂದ ಬಂದ ಮಾಹಿತಿಯನ್ನು ಕ್ರೋಢೀಕರಣ ಮಾಡಿ ಹೆಚ್ಚು ಮತಗಳನ್ನು ಪಡೆದ ಅಭ್ಯರ್ಥಿಗಳ ಹೆಸರನ್ನು ರಾಜ್ಯ ಘಟಕದ ಚುನಾವಣಾಧಿಕಾರಿ ಸಿ.ಎಸ್. ವೀರೇಶ ಮಂಗಳವಾರ ಮಧ್ಯಾಹ್ನ ಪ್ರಕಟಿಸಿದರು.


ಗದಗ ಜಿಲ್ಲೆಯಲ್ಲಿ ಪಡೆದುಕೊಂಡ ಮತಗಳು ಸಂಗನಗೌಡ ಪಾಟೀಲ-275, ವೀರೇಶ ಕೂಗು-235, ವೀರನಗೌಡ ಪಾಟೀಲ-221 ಹಾಗೂ ಎಸ್.ಎಸ್. ಹಿರೇಮಠ 164 ಆಗಿದೆ. ಬಸವರಾಜ ಬಿಳೇಯಲಿ ಗದಗ ಜಿಲ್ಲಾ ಚುನಾವಣಾಧಿಕಾರಿಯಾಗಿ ಕಾರ್ಯ ನಿರ್ವಹಿಸಿದರು. ಇವರೊಂದಿಗೆ ಎಲ್.ಎಸ್. ನೀಲಗುಂದ, ಬಿ.ಡಿ. ಪಾಟೀಲ, ರಾಚಣ್ಣ ನಾರಾಯಣಪೂರ, ಪ್ರೊ. ಎಂ.ಸಿ. ವಗ್ಗಿ, ಪ್ರೊ. ಕೆ.ಎಚ್. ಬೇಲೂರ, ಬಿ.ಎಫ್. ಡೋಣಿ, ಬಿ.ಡಿ. ಕಿಲಬನವರ, ಯಲ್ಲಮ್ಮ ಬಿಂಗಿ ಅವರು ಚುನಾವಣಾ ಸಿಬ್ಬಂದಿಯಾಗಿ ಕಾರ್ಯನಿರ್ವಹಿಸಿದರು.

ಗದಗ ಜಿಲ್ಲೆಯಲ್ಲಿ ಶಾಂತ ರೀತಿಯ ಚುನಾವಣೆ ಜರುಗಿಸಿದ ಚುನಾವಣಾಧಿಕಾರಿಯನ್ನು, ವಿಜೇತರಾದ ಸಂಗನಗೌಡ ಪಾಟೀಲರನ್ನು ಹಾಗೂ ಮತದಾನ ಮಾಡಿದ ಎಲ್ಲ ಮತದಾರರನ್ನು ಅಖಿಲ ಭಾರತ ವೀರಶೈವ ಮಹಾಸಭಾದ ಜಿಲ್ಲಾಧ್ಯಕ್ಷ ಶರಣಬಸಪ್ಪ ಗುಡಿಮನಿ ಅಭಿನಂದಿಸಿದ್ದಾರಲ್ಲದೆ ಚುನಾವಣೆಗೆ ಸ್ಪರ್ಧಿಸಿದ್ದ ನಾಲ್ವರೂ ಅಭ್ಯರ್ಥಿಗಳು ಸೇರಿದಂತೆ ಜಿಲ್ಲಾ ತಾಲೂಕಾ ಪದಾಧಿಕಾರಿಗಳು, ಆಜೀವ ಸದಸ್ಯರೆಲ್ಲರೂ ಸೇರಿ ಒಳ್ಳೆ ಕೆಲಸ ಮಾಡೋಣ ಎಂದು ಮನವಿ ಮಾಡಿಕೊಂಡಿದ್ದಾರೆ.

## ಮಹೇಶ್ ಪಬ್ಲಿಕ್ ಸ್ಕೂಲ್‌ನಲ್ಲಿ

# ಕೃಷ್ಣ ಜನ್ಮಾಷ್ಟಮಿ ಆಚರಣೆ

**■ ವಿಜಯಸಾಕ್ಷಿ ಸುದ್ದಿ, ಗದಗ**



ಇಲ್ಲಿನ ಮುಂಡರಗಿ ರಸ್ತೆಯಲ್ಲಿರುವ ಮಹೇಶ್ ಪಬ್ಲಿಕ್ ಸ್ಕೂಲ್‌ನಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ಶ್ರೀ ಕೃಷ್ಣ ಜನ್ಮಾಷ್ಟಮಿ ಪ್ರಯುಕ್ತ ಶಾಲಾ ಮಕ್ಕಳು ಶ್ರೀ ಕೃಷ್ಣನ ವೇಷಧಾರಿಯಾಗಿ ಹಾಗೂ ರಾಧೆಯ ವೇಷಧಾರಿಯಾಗಿ ಜನಮನ ಸೆಳೆದರು.

ಕಾರ್ಯಕ್ರಮದಲ್ಲಿ ಶಾಲಾ ಮುಖ್ಯೋಪಾಧ್ಯಾಯೆ ವಿಜಯಲಕ್ಷ್ಮೀ ಸಹ ಶಿಕ್ಷಕಿಯರಾದ ಸವಿತಾ, ಲಲಿತ, ಸಿರಿಗೌರಿ, ಐಶ್ವರ್ಯ, ಸವಿತಾ ಗದ್ದಿಗೌಡರ್, ಭಾಗ್ಯಶ್ರೀ ಹಿರೇಮಠ, ಶಾರದಾ, ತ್ರಿವೇಣಿ ಹಾಗೂ ಸಹಶಿಕ್ಷಕ ಸಚಿನ್ ಖೋಡೆ ಭಾಗವಹಿಸಿದ್ದರು.

## ಹಿರಿಯ ನಾಗರಿಕರ ದಿನಾಚರಣೆ ಪೂರ್ವಭಾವಿ ಸಭೆ

# ದಿನಾಚರಣೆಯನ್ನು ಯಶಸ್ವಿಗೊಳಿಸಿ

**■ ವಿಜಯಸಾಕ್ಷಿ ಸುದ್ದಿ, ಗದಗ**



ಜಿಲ್ಲೆಯಲ್ಲಿ ಅಕ್ಟೋಬರ್ 1ರಂದು ಹಿರಿಯ ನಾಗರಿಕರ ದಿನಾಚರಣೆಯನ್ನು ಅಚ್ಚುಕಟ್ಟಾಗಿ ಮತ್ತು ವ್ಯವಸ್ಥಿತವಾಗಿ ನಿರ್ವಹಿಸಬೇಕು ಎಂದು ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಪಿ.ವಾಯ್. ಶೆಟ್ಟೆಪ್ಪನವರ ಹೇಳಿದರು.

ನಗರದ ಜಿಲ್ಲಾಡಳಿತ ಭವನದಲ್ಲಿ ಮಂಗಳವಾರ ಜಿಲ್ಲಾ ಮಟ್ಟದಲ್ಲಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆಯನ್ನು ಆಚರಿಸುವ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿಶ್ವ ಹಿರಿಯ ನಾಗರಿಕರ ದಿನಾಚರಣೆಯನ್ನು ಸರ್ಕಾರದ ಮಾರ್ಗಸೂಚಿಯಂತೆ ಆಚರಿಸಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಹಿರಿಯ ನಾಗರಿಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ದಿನಾಚರಣೆಯನ್ನು ಯಶಸ್ವಿಗೊಳಿಸಬೇಕು ಎಂದು ಹೇಳಿದರು.

ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಅಧಿಕಾರಿ ಮಹಾಂತೇಶ ಮಾತನಾಡಿ, ವಿಶ್ವ ಹಿರಿಯ ನಾಗರಿಕರ ದಿನಾಚರಣೆಯ ಪ್ರಯುಕ್ತ ಹಿರಿಯ ನಾಗರಿಕರಿಗಾಗಿ ಸೆಪ್ಟೆಂಬರ್ 4ರಂದು ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಏರ್ಪಡಿಸಲಾಗುವುದು. ಸ್ಪರ್ಧೆಗಳಲ್ಲಿ ಹಿರಿಯ ನಾಗರಿಕರು ಉತ್ಸಾಹದಿಂದ ಪಾಲ್ಗೊಳ್ಳಬೇಕೆಂದು ತಿಳಿಸಿದರು.

ಸಭೆಯಲ್ಲಿ ಹಿರಿಯ ನಾಗರಿಕರ ಆರೋಗ್ಯ ತಪಾಸಣೆ ಆಯೋಜಿಸುವ ಕುರಿತು ಹಾಗೂ ವಿವಿಧ ಸೌಲಭ್ಯಗಳ ಮಾಹಿತಿ ಒದಗಿಸುವ ಕುರಿತು ಚರ್ಚಿಸಲಾಯಿತು. ಸಭೆಯಲ್ಲಿ ಹಿರಿಯ ನಾಗರಿಕರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಸೆಪ್ಟೆಂಬರ್ 4ರಂದು ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗುವ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳ ವಿವರ: ಕ್ರೀಡಾ ಸ್ಪರ್ಧೆಯಲ್ಲಿ ಭಾಗವಹಿಸಿದ ಹಿರಿಯ ನಾಗರಿಕರು ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಭಾಗವಹಿಸುವಂತಿಲ್ಲ. ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಪಾಲ್ಗೊಂಡ ಹಿರಿಯ ನಾಗರಿಕರು ಕ್ರೀಡಾ ಸ್ಪರ್ಧೆಯಲ್ಲಿ ಭಾಗವಹಿಸುವಂತಿಲ್ಲ.

ಕ್ರೀಡೆಗಳು: ಬಿರುಸಿನ ನಡಿಗೆ, ಬಕೆಟ್‌ನಲ್ಲಿ ಬಾಲನ್ನು ಎಸೆಯುವುದು, ಮ್ಯೂಸಿಕಲ್ ಚೇರ್.

**ಸಾಂಸ್ಕೃತಿಕ ಸ್ಪರ್ಧೆ:** ಏಕಪಾತ್ರಾಭಿನಯ, ಗಾಯನ ಸ್ಪರ್ಧೆ.

ಮಾತೃ ನಮನ ಕಾರ್ಯಕ್ರಮದಲ್ಲಿ ನಗರಸಭೆ ಆಯುಕ್ತ ಮಹೇಶ ಪೋತದಾರ ಅಭಿಪ್ರಾಯ

# ಸಂಸ್ಕಾರಯುತ ಶಿಕ್ಷಣದಿಂದ ಬಾಳು ಹಸನು

■ವಿಜಯಸಾಕ್ಷಿ ಸುದ್ದಿ, ಗದಗ

ಕೇವಲ ಶಿಕ್ಷಣ, ಪದವಿಯಿಂದ ಮಾತ್ರ ಸುಂದರ ಬದುಕನ್ನು ಕಟ್ಟಿಕೊಳ್ಳಲು ಸಾಧ್ಯವಿಲ್ಲ. ಸಂಸ್ಕಾರಯುತ ಶಿಕ್ಷಣದಿಂದ ಮಾತ್ರ ಉತ್ತಮ ಬದುಕನ್ನು ಕಟ್ಟಿಕೊಳ್ಳಲು ಸಾಧ್ಯ. ಇಂತಹ ಸಂಸ್ಕಾರ ಮನೆಯಿಂದ, ತಾಯಿಯಿಂದಲೇ ಆರಂಭವಾಗುವುದು. ಹೀಗಾಗಿ ಪ್ರತಿಯೊಬ್ಬರಿಗೂ ತಾಯಿಯೇ ಜಗತ್ತು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಹಾಗೂ ನಗರಸಭೆ ಆಯುಕ್ತರಾದ ಮಹೇಶ ಪೋತದಾರ ಅಭಿಪ್ರಾಯಪಟ್ಟರು.

ಅವರು ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳು ದತ್ತು ಪಡೆದ ಸಿದ್ದಲಿಂಗ ನಗರದ ಸರ್ಕಾರಿ ಪ್ರೌಢಶಾಲೆಯಲ್ಲಿ ಏರ್ಪಡಿಸಿದ್ದ 'ಮಾತೃನಮನ' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ನಿಮ್ಮ ಮಕ್ಕಳೇ ನಿಮ್ಮ ಭವಿಷ್ಯವಾಗಬೇಕು. ಅಂತಹ ಭವಿಷ್ಯದ ವಾತಾವರಣವನ್ನು ನಿರ್ಮಾಣ ಮಾಡುವ ದೊಡ್ಡ ಹೊಣೆಗಾರಿಕೆ ತಂದೆ-ತಾಯಿಯ ಮೇಲಿದೆ. ಮನೆಯ ಉತ್ತಮ ಸಂಸ್ಕಾರದಿಂದ ಒಳ್ಳೆಯ ಮಕ್ಕಳನ್ನು ರೂಪಿಸಲು ಸಾಧ್ಯ. ಶಿಕ್ಷಣ,



ಪದವಿಗಳು ಭವಿಷ್ಯದ ಬದುಕಿನಲ್ಲಿ ಆಸರೆ ಮಾತ್ರ. ಆದರೆ ಸಂತೃಪ್ತ ಜೀವನ ಕಳೆಯಲು ಸಂಸ್ಕಾರಯುತ ಶಿಕ್ಷಣದಿಂದ ಮಾತ್ರ ಸಾಧ್ಯ. ಶಿಕ್ಷಕರು ಜಗತ್ತಿನ ಎಲ್ಲ ಕ್ಷೇತ್ರದ ಪ್ರತಿಭಾನ್ವಿತರನ್ನು ಮೇಧಾವಿಗಳನ್ನು ರೂಪಿಸಿದರೂ ನಾನೊಬ್ಬ ಸಾಮಾನ್ಯ ಶಿಕ್ಷಕ ಎನ್ನುವ ಮನೋಭಾವ ಅವರದ್ದಾಗಿರುತ್ತದೆ.

ನೂರಾರು ತಾಯಂದಿರ ಪಾದಪೂಜೆಯನ್ನು ವಿದ್ಯಾರ್ಥಿಗಳು ಮಾಡುವ ಮೂಲಕ ಮಾತೃನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ತಾಯಂದಿರು ಕೂಡಾ ತಮ್ಮ ಮಕ್ಕಳು ಉತ್ತಮ ಪ್ರಜೆಯಾಗಲಿ ಎಂದು ಹಾರೈಸಿದ್ದು ಸೇರಿದವರೆಲ್ಲರಿಗೂ ಕೆಲ ಕ್ಷಣ ಹೃದಯವನ್ನು ಸ್ಪರ್ಶಿಸುವಂತಿತ್ತು.

ಡಾ. ಬಸವರಾಜ ಧಾರವಾಡ, ಎಚ್.ಆರ್. ಪೆಟ್ಲೂರ್, ಉಪನ್ಯಾಸಕ ಶಂಕರ ಹಡಗಲಿ ಸೇರಿದಂತೆ ಅಧ್ಯಕ್ಷತೆ ವಹಿಸಿದ್ದ ಪ್ರಭಾರಿ ಮುಖ್ಯೋಪಾಧ್ಯಾಯರಾದ ಜಯಲಕ್ಷ್ಮೀ ಅಣ್ಣಿಗೇರಿ ಮುಂತಾದವರು ಮಾತನಾಡಿದರು.

ಈ ಸಂದರ್ಭದಲ್ಲಿ ಶಿಕ್ಷಕರಾದ ಸುಭಾಸ ನಿಡಸನೂರ, ಎ.ಎಮ್. ಸಂಗನಾಳ, ಶಂಕ್ರಮ್ಮ ಆರ್. ಹಣಮಗೌಡ್ರು, ಎಂ.ಐ. ಶಿವನಗೌಡ್ರು, ಮಂಜುಳಾ ಪಿ.ಸಾಮ್ರಾಣಿ, ಸುಮಂಗಲ ಎಂ.ಪತ್ತಾರ್, ಶೋಭಾ ಎಸ್.ಗಾಳಿ, ರಮೇಶ್ ಬಸರಿ, ಸಾವಿತ್ರಿ ಎ.ಗದ್ದನಕೇರಿ, ಎನ್.ಆರ್. ಶಿರೋಳ್, ಸಬಿಯಾ ಯು.ಕುಷ್ಟಗಿ, ಸಂಜೀವಿನಿ ಕೂಲಗುಡಿ, ಮಂಜುಳಾ ಟಿ, ಪದ್ಮಾ ವಿ.ದಾಸರ್, ಲಕ್ಷ್ಮಮ್ಮ ಮಾಳೋತ್ತರ್ ಮುಂತಾದವರು ಉಪಸ್ಥಿತರಿದ್ದರು.

ಶಶಿಕಲಾ ಬಿ.ಗುಳೇದ ಸ್ವಾಗತಿಸಿದರು. ಗಂಗಾ ಎಂ.ಅಳವಂಡಿ ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮ ಆಯೋಜಕಿ ಶಾರದಾ ಬಾಣದ ಪ್ರಾಸ್ತಾವಿಕವಾಗಿ ಮಾತನಾಡಿ ವಂದಿಸಿದರು.

ಶಿಕ್ಷಕರ ತ್ಯಾಗ, ಶ್ರಮ, ತಂದೆ-ತಾಯಿಯರ ಆಶಯ ಈಡೇರಬೇಕಾದರೆ ವಿದ್ಯಾರ್ಥಿಗಳು ತಮ್ಮ ಸುಂದರ ಬದುಕನ್ನು ಕಟ್ಟಿಕೊಳ್ಳಲು ಅನಾವಶ್ಯಕ ವಿಷಯಗಳಿಂದ ದೂರವಾಗಿ ಭವಿಷ್ಯಕ್ಕೆ ಸಮಾಜದ ಒಳಿತಿಗೆ ಹಾಗೂ ತಂದೆ-ತಾಯಿಗಳ ಹಿತ ಕಾಪಾಡುವತ್ತ ಗಮನ ಹರಿಸಬೇಕು. ಆ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಹೆಜ್ಜೆ ಇಡಬೇಕು. ಈ ಮಾತೃನಮನ ಕಾರ್ಯಕ್ರಮ ವಿದ್ಯಾರ್ಥಿಗಳ ಉತ್ತಮ ಭವಿಷ್ಯಕ್ಕೆ ಪೂರಕವಾಗಬಲ್ಲದು ಎಂದು ಮಹೇಶ ಪೋತದಾರ ಅಭಿಪ್ರಾಯಪಟ್ಟರು.

## ಜಿ.ಪಂ ಸಿಇಓ ಅನಿರೀಕ್ಷಿತ ಭೇಟಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರ ಹಾಗೂ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳ ವಸತಿ ನಿಲಯಕ್ಕೆ ಜಿ.ಪಂ ಸಿಇಓ ಭರತ್ ಎಸ್ ಮಂಗಳವಾರ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲಿಸಿದರು.

ಪಟ್ಟಣದ ಅಗಸ್ತ್ಯತೀರ್ಥ ರಸ್ತೆಯಲ್ಲಿರುವ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳ ವಸತಿ ನಿಲಯಕ್ಕೆ ಭೇಟಿ ನೀಡಿ ಅಡುಗೆ ಕೋಣೆ, ಶೌಚಾಲಯಗಳ ವ್ಯವಸ್ಥೆಯನ್ನು ಪರಿಶೀಲಿಸಿ ವಿದ್ಯಾರ್ಥಿಗಳೊಂದಿಗೆ ಸಮಾಲೋಚನೆ ನಡೆಸಿದರು. ವಿದ್ಯಾರ್ಥಿಗಳಿಗೆ ಸರ್ಕಾರದಿಂದ ಲಭ್ಯವಾಗುವ ಸೌಲಭ್ಯಗಳನ್ನು ನಿಯಮಾನುಸಾರ ವಿತರಣೆ ಮಾಡಬೇಕು ಎಂದು ಹಾಸ್ಟೆಲ್ ಸಿಬ್ಬಂದಿಗಳಿಗೆ ಸೂಚಿಸಿದರು. ವಿದ್ಯಾರ್ಥಿನಿಲಯದ ಆವರಣದಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳಬೇಕು. ಉತ್ತಮವಾದ, ಶುಚಿರುಚಿಯಾದ ಆಹಾರ ಒದಗಿಸಬೇಕು ಎಂದು ಸೂಚಿಸಿದರು.

ನಂತರ ಪಟ್ಟಣದ ಸರಕಾರಿ ಸಮುದಾಯ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಆಸ್ಪತ್ರೆಯ ವಾರ್ಡ್‌ಗಳಲ್ಲಿ ಚಿಕಿತ್ಸೆ ಪಡೆಯುತ್ತಿರುವ ರೋಗಿಗಳಿಂದ ಚಿಕಿತ್ಸಾ ವ್ಯವಸ್ಥೆ ಬಗ್ಗೆ ಮಾಹಿತಿ ಪಡೆದರು. ರೋಗಿಗಳಿಗೆ ವಿಳಂಬ ಮಾಡದೇ ಚಿಕಿತ್ಸೆ ನೀಡುವಂತೆ ಸಿಬ್ಬಂದಿಗಳಿಗೆ ಸೂಚಿಸಿ, ಆಸ್ಪತ್ರೆಯ ಶೌಚಾಲಯ, ಔಷಧ ವಿತರಣಾ ಕೇಂದ್ರ, ದಾಸ್ತಾನು ಕೊಠಡಿ, ಡಯಾಲಿಸಿಸ್ ವಾರ್ಡ್, ಹೊರ ರೋಗಿಗಳ ಚಿಕಿತ್ಸಾ ಕೊಠಡಿಗಳನ್ನು ವೀಕ್ಷಿಸಿದರು.

ಈ ಸಂದರ್ಭದಲ್ಲಿ ತಾಲೂಕು ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ, ತಾಲೂಕು ಮಟ್ಟದ ವಿವಿಧ ಅಧಿಕಾರಿಗಳು, ಆಸ್ಪತ್ರೆಯ ಡಾ. ಗುರುರಾಜ ಕುಡಗಿ, ಡಾ. ಪ್ರವೀಣ ಸಜ್ಜನರ ಹಾಗೂ ಹಾಸ್ಟೆಲ್ ಸಿಬ್ಬಂದಿ ಇದ್ದರು.

## ಸರ್ಕಾರಿ ಶಾಲೆಯ ಮಕ್ಕಳೊಂದಿಗೆ ಬಿಸಿಯೂಟ ಸವಿದ ರಾಷ್ಟ್ರಪಕ್ಷಿ ನವಿಲು.!



■ವಿಜಯಸಾಕ್ಷಿ ಸುದ್ದಿ, ವಿಜಯಪುರ

ಭಾರತದ ರಾಷ್ಟ್ರಪಕ್ಷಿ ಎನಿಸಿರುವ ನವಿಲುಗಳು ಪಕ್ಷಿಗಳಲ್ಲೇ ಅತ್ಯಂತ ಸುಂದರವಾದದ್ದು. ಅವು ಗರಿ ಬಿಚ್ಚಿದರಂತೂ ಅವುಗಳನ್ನು ನೋಡಲೆರಡು ಕಣ್ಣು ಸಾಲದು.

ಹೀಗಾಗಿಯೇ ನವಿಲುಗಳನ್ನು ಬಣ್ಣಿಸಿ ಹಲವು ಹಾಡುಗಳು ಮೂಡಿ ಬಂದಿವೆ. ಸುಂದರ ಹೆಣ್ಣಿನ ವಯ್ಯಾರವನ್ನು ನವಿಲಿನ ನೃತ್ಯಕ್ಕೆ ಕವಿ ಹೋಲಿಸುತ್ತಾನೆ. ಕೃಷ್ಣ ಪರಮಾತ್ಮನ ಶಿರದಲ್ಲಿ ಜಾಗ ಪಡೆದಿದೆ ನವಿಲಿನ ಗರಿ. ಹೀಗೆ ಪೌರಾಣಿಕವಾಗಿಯೂ ಹಿನ್ನೆಲೆಯನ್ನು ಹೊಂದಿರುವ ನವಿಲು ಮಕ್ಕಳೊಂದಿಗೆ ಬಿಸಿ ಊಟ ಸವಿದು ಮಕ್ಕಳಿಗೆ ಮನೊಲ್ಲಾಸ ಹೆಚ್ಚಿಸಿದ ಘಟನೆ ನಡೆದಿದೆ.

ಹೌದು ತಾಲ್ಲೂಕಿನ ಜಂಬಗಿ ಗ್ರಾಮದ ಕೆರೂರವಸ್ತಿ ಸರ್ಕಾರಿ ಕಿರಿಯ ಪ್ರಾಥಮಿಕ ವಸ್ತಿ ಶಾಲಾ ಮಕ್ಕಳು ಬಿಸಿಯೂಟ ಸೇವಿಸುವಾಗ ಹಾರಿ ಬಂದ ರಾಷ್ಟ್ರ ಪಕ್ಷಿ ಮಕ್ಕಳು ತಟ್ಟೆಯಲ್ಲಿ ಅನ್ನ ಹಾಕಿಕೊಂಡು ಪ್ರಾರ್ಥನೆ ಮಾಡುತ್ತಾ ಕುಳಿತಾಗ ಅನ್ನದ ತಟ್ಟೆಗೆ ಕಡೆಗೆ ಸಾಗಿದೆ. ಈ ಸಮಯದಲ್ಲಿ

ವಿದ್ಯಾರ್ಥಿನಿಯೋರ್ವಳು ತನ್ನ ತಟ್ಟೆಯನ್ನು ನವಿಲಿಗೆ ಕೊಟ್ಟು ಬೇರೊಂದು ತಟ್ಟೆ ತೆಗೆದುಕೊಂಡಿದ್ದಾಳೆ.

ವರ್ಗಾಕೋಣೆಯ ಹತ್ತಿರವು ಬಂದ ನಾಟ್ಯ ಮಯೂರಿ ಧಾನ್ಯಗಳನ್ನು ಸವಿದು ತನ್ನ ಹಸಿವನ್ನು ನೀಗಿಸಿಕೊಂಡಿದೆ.

ಶಾಲಾ ಆವರಣವು ಹಚ್ಚ ಹಸಿರಿನ ಗಿಡಗಳ ಮಧ್ಯೆ ಸುಂದರ ಪ್ರಕೃತಿ ಸೌಂದರ್ಯ ಹೊಂದಿದ್ದು, ಪ್ರತಿದಿನ ಮಕ್ಕಳು ಈ ಪ್ರಕೃತಿ ಮಡಿಲಲ್ಲಿ ಊಟ ಸೇವಿಸುತ್ತಾರೆ. ಹಸಿರು ತುಂಬಿದ ವಾತಾವರಣದಲ್ಲಿ ರಾಷ್ಟ್ರಪಕ್ಷಿ ಆಗಮಿಸಿದ್ದರಿಂದ ವಿದ್ಯಾರ್ಥಿಗಳು ಖುಷ್ ಆಗಿದ್ದಾರೆ. ಈ ಸಂದರ್ಭದಲ್ಲಿ ಊಟ ಸವಿಯುತ್ತಾ ಮುಖ್ಯೋಪಾಧ್ಯಾಯ ಪಿ.ಪಿ.ನಾಯಿಕ, ಸಹಶಿಕ್ಷಕಿ ಎನ್.ವೈ.ರಾಠೋಡ ಮಕ್ಕಳಿಗೆ ರಾಷ್ಟ್ರಪಕ್ಷಿಯ ಕುರಿತು ಸಂಪೂರ್ಣ ವಿವರ ನೀಡಿ ಮಕ್ಕಳಿಗೆ ಪಕ್ಷಿ ಹಾಗೂ ಪ್ರಾಣಿ ಪ್ರೀತಿಯನ್ನು ಹೆಚ್ಚಿಸಿದ್ದಾರೆ.

## ಕಟ್ಟಡ ನಿರ್ಮಾಣಕ್ಕೆ ದೇಣಿಗೆ

■ವಿಜಯಸಾಕ್ಷಿ ಸುದ್ದಿ, ಗದಗ

ಪಂಚಮಸಾಲಿ ಸಮಾಜ ಸೇವಾ ಟ್ರಸ್ಟ್ ವತಿಯಿಂದ ನಗರದ ಕಳಸಾಪುರ ರಸ್ತೆಯಲ್ಲಿ ಶ್ರೀ ರಾಣಿ ಚನ್ನಮ್ಮ ಭವನದ ಕಟ್ಟಡ ನಿರ್ಮಾಣ ಕಾರ್ಯಕ್ಕೆ ಉದ್ದೇಶಿಸಲಾಗಿದ್ದು, ಟ್ರಸ್ಟ್‌ನ ಸದಸ್ಯರು ಸಮಾಜದ ಮುಖಂಡರಾದ ರಾಮನಗೌಡ ದಾನಪ್ಪಗೌಡ್ರ ನಿವಾಸಕ್ಕೆ ತೆರಳಿ ಈ ಬಗ್ಗೆ ಚರ್ಚಿಸಿದರು.

ಸಮಾಜ ಸಂಘಟನೆಗಾಗಿ ತಮ್ಮ ಸ್ವಇಚ್ಛೆಯಿಂದ 5 ಲಕ್ಷ ರೂಪಾಯಿಗಳ ದೇಣಿಗೆಯ ಚೆಕ್‌ನ್ನು ಟ್ರಸ್ಟಿನ ಸದಸ್ಯರಿಗೆ ಹಸ್ತಾಂತರಿಸಿ ಮಾತನಾಡಿದ ರಾಮನಗೌಡ ದಾನಪ್ಪಗೌಡ್ರ, ಪಂಚಮಸಾಲಿ ಸಮಾಜದಲ್ಲಿ ಹುಟ್ಟಿದ ನಾವು ಸಮಾಜಕ್ಕಾಗಿ ಏನಾದರೂ ಮಾಡಬೇಕು



ಎನ್ನುವ ಮಹಾದಾಸೆಯನ್ನು ಹೊಂದಿ ಈ ದೇಣಿಗೆಯನ್ನು ನೀಡುತ್ತಿದ್ದು, ಶೀಘ್ರದಲ್ಲಿಯೇ ಭೂಮಿ ಪೂಜೆ ನೆರವೇರಿಸಿ ಕಾಮಗಾರಿ ಪ್ರಾರಂಭವಾಗಲಿ. ಮುಖಂಡರನ್ನು ಸಂಪರ್ಕಿಸಿ ಭವನ ನಿರ್ಮಾಣ ಕಾಮಗಾರಿಗೆ ಹೆಚ್ಚಿನ ದೇಣಿಗೆಯನ್ನು ಕೊಡಿಸುವಲ್ಲಿ ಶ್ರಮಿಸುತ್ತೇನೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಟ್ರಸ್ಟಿನ ಅಧ್ಯಕ್ಷ ಮೋಹನ ಮಾಳಶೆಟ್ಟಿ, ಶಾಂತಣ್ಣ ಮುಳವಾಡ, ಸಿದ್ಧಲಿಂಗೇಶ್ವರ ಕರಬಿಸ್ಟಿ, ಸಿದ್ದನಗೌಡ ಪಾಟೀಲ, ವಿಶ್ವನಾಥ್ ಹಳ್ಳಿಕೇರಿ, ಶಿವರಾಜಗೌಡ ಹಿರೇಮನಿ ಪಾಟೀಲ, ಸಂಗಮೇಶ್ ಕವಳಿಕಾಯಿ ಮುಂತಾದವರು ದಾನಪ್ಪಗೌಡ್ರ ದಂಪತಿಗಳನ್ನು ಗೌರವಿಸಿ ಶುಭ ಹಾರೈಸಿದರು.

## ಶ್ರೀ ವೀರಭದ್ರೇಶ್ವರ ದೇವಸ್ಥಾನಕ್ಕೆ ಪಾದಯಾತ್ರೆ



■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ಉಸಗಿನಗಟ್ಟಿ ಓಣಿ ಶ್ರೀ ಮಲ್ಲಿಕಾರ್ಜುನ ದೇವಸ್ಥಾನದ ಸದ್ಭಕ್ತರು ಇತ್ತೀಚೆಗೆ ಶ್ರೀ ಶಿಂಗಟಾಲೂರ ವೀರಭದ್ರೇಶ್ವರ ದೇವಸ್ಥಾನಕ್ಕೆ ಪಾದಯಾತ್ರೆ ಕೈಗೊಂಡರು. ಸುಮಾರು 15 ವರ್ಷಗಳಿಂದ ಪಾದಯಾತ್ರೆಯನ್ನು ಮಾಡುತ್ತಿದ್ದು, ಶ್ರೀ ಮುತ್ತು ಹರಪನಹಳ್ಳಿ ಇವರ ನೇತೃತ್ವದಲ್ಲಿ ಪಾದಯಾತ್ರೆಯನ್ನು ಕೈಗೊಳ್ಳಲಾಗಿತ್ತು.

ಪಾದಯಾತ್ರೆಯಲ್ಲಿ ಕುಮಾರ ಪಲ್ಲೇದ, ಗಣೇಶ ಹರಪನಹಳ್ಳಿ, ರಾಕೇಶ ಅಣ್ಣಿಗೇರಿ, ವೀರೇಶ ಅಣ್ಣಿಗೇರಿ, ಪ್ರವೀಣ ಅಣ್ಣಿಗೇರಿ, ನವೀನ ಹರಪನಹಳ್ಳಿ, ಗವಿಸಿದ್ಧೇಶ್ವರ ಕನ್ಯಾಳಮಠ, ಕೊಟ್ರೇಶ ದುಂಡಿ, ಶಿವಕುಮಾರ ಕೊಂಡಿಕೊಪ್ಪ, ಅಮಿತ ಹರಪನಹಳ್ಳಿ ಮುಂತಾದವರು ಪಾಲ್ಗೊಂಡಿದ್ದರು.

## ಆಧುನಿಕ ಮಹಿಳೆ ಅಬಲೆಯಲ್ಲ, ಸಬಲೆ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳೆ ಶೈಕ್ಷಣಿಕ, ಆರ್ಥಿಕ ಹಾಗೂ ಸಾಮಾಜಿಕವಾಗಿ ಪ್ರಗತಿ ಸಾಧಿಸಬೇಕು. ಅಂದಾಗ ಮಾತ್ರ ಸ್ವಾವಲಂಬಿ ಜೀವನ ನಡೆಸಲು ಸಾಧ್ಯ ಎಂದು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ಯೋಗೇಶ ಎ. ಹೇಳಿದರು.

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ ವತಿಯಿಂದ ತಾಲೂಕಿನ ಹೊಸಹಳ್ಳಿ ಗ್ರಾಮದ ದುರ್ಗಾದೇವಿ ದೇವಸ್ಥಾನದಲ್ಲಿ ಬುಧವಾರ ನಡೆದ ಶಿವಾನಿ ಜ್ಞಾನ ವಿಕಾಸ ಕೇಂದ್ರದ ಉದ್ಘಾಟನೆ ಹಾಗೂ ಸ್ವ-ಉದ್ಯೋಗ ಪ್ರೇರಣಾ ಶಿಬಿರ ಉದ್ಘಾಟಿಸಿ ಮಾತನಾಡಿ, ಆಧುನಿಕ ಮಹಿಳೆ ಅಬಲೆ ಅಲ್ಲ, ಸಬಲೆ. ಶಿಕ್ಷಣ, ಕಲೆ, ಸಾಹಿತ್ಯ, ವಿಜ್ಞಾನ-ತಂತ್ರಜ್ಞಾನ ಹೀಗೆ ಸರ್ವ ರಂಗದಲ್ಲೂ ತನ್ನ ಛಾಪು ಮೂಡಿಸಿದ್ದಾಳೆ. ಹೀಗಾಗಿ ಗ್ರಾಮೀಣ ಭಾಗದ ಮಹಿಳೆಯರು ಕೂಡ ಮುಖ್ಯವಾಹಿನಿಗೆ ಬರವ ಪ್ರಯತ್ನ ಮಾಡಬೇಕು ಎಂದರು.




ಆರ್ಥಿಕ ಸ್ವಾವಲಂಬಿ ಮಹಿಳೆ ತಮ್ಮ ಮಕ್ಕಳಿಗೆ ಹಾಗೂ ಸಮಾಜಕ್ಕೆ ಮಾದರಿಯಾಗಿ ನಿಲ್ಲುತ್ತಾಳೆ. ಇದು ನಮ್ಮ ಸಂಸ್ಕೃತಿಯಲ್ಲಿ ಆಳವಾಗಿ ಬೇರೂರಿದ ಲಿಂಗ ತಾರತಮ್ಯ ನೀತಿ ತೊಡೆದು ಹಾಕಲು ಸಹಕಾರಿಯೂ ಆಗಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಕೊಪ್ಪಳ ಪ್ರಾದೇಶಿಕ ಕಚೇರಿ ಜ್ಞಾನ ವಿಕಾಸದ ಯೋಜನಾಧಿಕಾರಿ ಸುಧಾ ಗಾಂವಕರ್ ಮಾತನಾಡಿ, ಗ್ರಾಮಾಭಿವೃದ್ಧಿ ಯೋಜನೆ ಹೇಮಾವತಿ ಹೆಗ್ಗಡೆ ಅಮ್ಮನವರ ಕನಸಿನ ಕೂಸು. ಹೀಗಾಗಿ ಗ್ರಾಮೀಣ ಭಾಗದ ಮಹಿಳೆಯರ ಆರ್ಥಿಕ ಸಬಲತೆ ಸಾಧಿಸಬೇಕೆಂದು ಕರೆ ನೀಡಿದರು.

ಗದಗ ತಾಲೂಕು ಯೋಜನಾಧಿಕಾರಿ ಸುರೇಂದ್ರ ನಾಯ್ಕ ಹಾಗೂ ಆಸೆಟ್ ಉಪನ್ಯಾಸಕ ಸಂಘಗಳ ನಿರ್ವಹಣೆ ಹಾಗೂ ಮಹಿಳಾ ಸಬಲೀಕರಣ ವಿಷಯದ ಬಗ್ಗೆ ಮಾತನಾಡಿದರು. ಗ್ರಾ.ಪಂ ಸದಸ್ಯೆ ಶಿವಲೀಲಾ ಮುಳಗುಂದ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಆಸೆಟ್ ಉಪನಿರ್ದೇಶಕ ಶಿವಕುಮಾರ, ಗ್ರಾ.ಪಂ ಉಪಾಧ್ಯಕ್ಷೆ ಸರೋಜಾ ಅಂಗಡಿ, ಒಕ್ಕೂಟದ ಅಧ್ಯಕ್ಷೆ ಮಂಜುಳಾ ರೋಣದ, ವಲಯ ಮೇಲ್ವಿಚಾರಕ ಶಿವರಾಜ, ತಾಲೂಕು ಜ್ಞಾನ ವಿಕಾಸ ಸಮನ್ವಯಾಧಿಕಾರಿ ಗಂಗಮ್ಮ, ಸೇವಾ ಪ್ರತಿನಿಧಿ ಮಹಾದೇವ ಮುಂತಾದವರು ಇದ್ದರು.

## ಸರಕಾರಿ ಶಾಲೆಗಳಲ್ಲಿಯೂ ಗುಣಮಟ್ಟದ ಶಿಕ್ಷಣ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬಹುತೇಕ ಸರಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದ್ದು, ಮಕ್ಕಳಿಗೆ ಸಾಕಷ್ಟು ಸೌಲಭ್ಯಗಳ ಜೊತೆಗೆ ಶಿಕ್ಷಣ ಇಲಾಖೆಯಲ್ಲಿ ಹೆಚ್ಚಿನ ಕಾರ್ಯಕ್ರಮಗಳು ನಡೆಯುತ್ತಿರುವುದು ಮೆಚ್ಚುಗೆಯ ವಿಷಯವಾಗಿದೆ ಎಂದು ಶಾಸಕ ಡಾ.ಚಂದ್ರು ಲಮಾಣಿ ಹೇಳಿದರು.

ಅವರು ಪಟ್ಟಣದ ಶ್ರೀ ಸೋಮೇಶ್ವರ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.3ರಲ್ಲಿ ಬುಧವಾರ ಲಕ್ಷ್ಮೇಶ್ವರ ದಕ್ಷಿಣ ಕ್ಲಸ್ಟರ್‌ನ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸರಕಾರಿ ಶಾಲೆಗಳ ಬಗ್ಗೆ ಜನರಲ್ಲಿ ಇರುವ ಕೆಟ್ಟ ಅಭಿಪ್ರಾಯಗಳು ಕಡಿಮೆಯಾಗಬೇಕು. ಈ ಹಿನ್ನೆಲೆಯಲ್ಲಿ ಸರಕಾರಗಳು ಸಾಕಷ್ಟು ಯೋಜನೆಗಳನ್ನು ರೂಪಿಸಿದ್ದು, ಮಕ್ಕಳಿಗೆ ಉತ್ತಮ ಶೈಕ್ಷಣಿಕ ಮೌಲ್ಯಗಳ ಜೊತೆಗೆ ಮಾನವೀಯ ಮೌಲ್ಯಗಳನ್ನು ಕಲಿಸುವ ಕಾರ್ಯವು ಸಹ ನಡೆಯುತ್ತಿರುವದು ಉತ್ತಮ ಬೆಳವಣಿಗೆಯಾಗಿದೆ. ಪ್ರತಿಭಾ ಕಾರಂಜಿ ಕೂಡ ಮಕ್ಕಳ ಪ್ರತಿಭೆಗೆ ಸೂಕ್ತ ವೇದಿಕೆಯಾಗಿದೆ ಎಂದು ಹೇಳಿದರು.

ಪುರಸಭೆ ಸದಸ್ಯೆ ಅಶ್ವಿನಿ ಅಂಕಲಕೋಟಿ, ಎಸ್‌ಡಿಎಂಸಿ ಅಧ್ಯಕ್ಷ ಸೋಮಣ್ಣ ಮಾಗಡಿ, ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯಕ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಸಮನ್ವಯಾಧಿಕಾರಿ ಬಿ.ಎಸ್. ಭಜಂತ್ರಿ, ಬಿಆರ್‌ಪಿಗಳಾದ ಈಶ್ವರ ಮೆಡ್ಲೇರಿ, ಬಸವರಾಜ ಯರಗುಪ್ಪಿ, ಎಲ್.ಎ. ನಡುವಿನಮನಿ, ಬಿ.ಎಂ. ಕುಂಬಾರ, ನಿರ್ಮಲಾ ಮಾಗಡಿ, ಸರೋಜಾ ಕಳ್ಳಿಮನಿ, ಎಸ್.ಎಚ್. ಪೂಜಾರ, ಎನ್.ಎಸ್. ಬಂಕಾಪೂರ, ಜೆ.ಎಸ್. ಹುಲ್ಲಣ್ಣವರ, ಜೆ.ಎಚ್. ಮಾಣಿಕ, ಎಚ್.ಡಿ. ನಿಂಗರಡ್ಡಿ, ನಾಗರಾಜ ಮಜ್ಜಿಗುಡ್ಡ, ಎಸ್.ಎ. ಮತ್ತೂರ, ಎಲ್.ಆರ್. ಮಲ್ಲಸಮುದ್ರ ಮುಂತಾದವರಿದ್ದರು.

ಪ್ರತಿಭಾ ಕಾರಂಜಿ ಸ್ಪರ್ಧೆಯಲ್ಲಿ 14 ಶಾಲೆಗಳ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಸಂಜೆ ಬಹುಮಾನ ವಿತರಣೆ ಕಾರ್ಯಕ್ರಮ ಜರುಗಿತು. ಪ್ರಾಸ್ತಾವಿಕವಾಗಿ ಸಿಆರ್‌ಪಿ ಸತೀಶ ಬೋಮಲೆ ಮಾತನಾಡಿದರು. ಎಮ್.ಎಮ್. ಕಳಸೂರ ಸ್ವಾಗತಿಸಿದರು. ಉಮೇಶ ನೇಕಾರ ನಿರೂಪಿಸಿದರು. ರಮೇಶ ಮಾಂಡ್ರೆ ವಂದಿಸಿದರು.

## ರೇಣುಕಾಸ್ವಾಮಿ ಕೊಲೆ ಕೇಸ್: ನಟ ದರ್ಶನ್ ಗ್ಯಾಂಗ್‌ಗೆ ಸೆ.9 ರವರೆಗೆ ನ್ಯಾಯಾಂಗ ಬಂಧನ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರೇಣುಕಾಸ್ವಾಮಿ ಕೊಲೆ ಕೇಸ್‌ನ ಆರೋಪದ ಮೇಲೆ ನಟ ದರ್ಶನ್ ಅಂಡ್ ಗ್ಯಾಂಗ್ ಜೈಲುವಾಸ ಅನುಭವಿಸುತ್ತಿತ್ತು. ಆದರೆ ಜೈಲು ಸೇರಿರೋ ದರ್ಶನ್ ರಾಜ್ಯಾತಿಥ್ಯದ ವೈರಲ್ ಫೋಟೋಗಳು ರಾಜ್ಯದಲ್ಲಿ ಸಂಚಲನ ಸೃಷ್ಟಿಸಿದೆ.

ದರ್ಶನ್ ಬಳ್ಳಾರಿ ಶಿಫ್ಟ್ ಹಿನ್ನೆಲೆಯಲ್ಲಿ ಬಳ್ಳಾರಿ ಜೈಲಿನ ಸಿಬ್ಬಂದಿ ಮತ್ತು ಪೊಲೀಸರು ಫುಲ್ ಅಲರ್ಟ್ ಆಗಿದ್ದಾರೆ.

ಚಿತ್ರದುರ್ಗ ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಗಳಾದ ದರ್ಶನ್ ಮತ್ತು ಗ್ಯಾಂಗ್‌ಗೆ ಸೆಪ್ಟೆಂಬರ್ 9ವರೆಗೆ ನ್ಯಾಯಾಂಗ ಬಂಧನ ವಿಸ್ತರಿಸಿ 24ನೇ ಎಸಿಎಂಎಂ ನ್ಯಾಯಾಲಯ ಆದೇಶ ಹೊರಡಿಸಿದೆ. ನ್ಯಾಯಾಂಗ ಬಂಧನ ಅಂತ್ಯವಾಗಿದ್ದ ಹಿನ್ನೆಲೆಯಲ್ಲಿ ಬುಧವಾರ ವಿಡಿಯೋ ಕಾನ್ಫರೆನ್ಸ್ ಮೂಲಕ ಆರೋಪಿಗಳನ್ನು ಮತ್ತೆ ನ್ಯಾಯಾಧೀಶರ ಮುಂದೆ ಹಾಜರುಪಡಿಸಲಾಗಿತ್ತು.

ಆರೋಪಿಗಳನ್ನು ಪುನಃ ನ್ಯಾಯಾಂಗ ಬಂಧನಕ್ಕೆ ನೀಡುವಂತೆ ಪೊಲೀಸರು ಮನವಿ ಮಾಡಿಕೊಂಡರು. ಮನವಿ ಪುರಸ್ಕರಿಸಿದ ನ್ಯಾಯಾಧೀಶರು ದರ್ಶನ್ ಮತ್ತು ಗ್ಯಾಂಗ್‌ನ ನ್ಯಾಯಾಂಗ ಬಂಧನ ಅವಧಿ ವಿಸ್ತರಿಸಿ ಮತ್ತೆ ಆದೇಶ ಹೊರಡಿಸಿದ್ದಾರೆ.

ನ್ಯಾಯಾಂಗ ಬಂಧನ ವಿಸ್ತರಣೆಗೊಂಡ ಬೆನ್ನಲ್ಲೇ ದರ್ಶನ್ ಅವರನ್ನು ಬಳ್ಳಾರಿ ಜೈಲಿಗೆ ಶಿಫ್ಟ್ ಮಾಡಲಾಗುತ್ತಿದೆ.

ಇಂದು ಸಿದ್ದರಾಮಯ್ಯ ಭವಿಷ್ಯ ನಿರ್ಧಾರ

## ಪ್ರಾಸಿಕ್ಯೂಷನ್ ಅನುಮತಿಯನ್ನು ಎತ್ತಿಹಿಡಿಯುತ್ತಾ ಹೈಕೋರ್ಟ್.?

■ವಿಜಯಸಾಕ್ಷಿ ಸುದ್ದಿ, , ಬೆಂಗಳೂರು

ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರಾದ ಥಾವರ್ ಚಂದ್ ಗೆಹಲೋತ್ ಪ್ರಾಸಿಕ್ಯೂಷನ್ ಗೆ ಅನುಮತಿ ನೀಡಿದ್ದನ್ನು ಪ್ರಶ್ನಿಸಿ ಸಿಎಂ ಸಿದ್ದರಾಮಯ್ಯ ಹೈಕೋರ್ಟ್ ಮೊರೆ ಹೋಗಿದ್ದಾರೆ. ಇಂದು ಹೈಕೋರ್ಟ್ ಈ ನಿಟ್ಟಿನಲ್ಲಿ ವಿಚಾರಣೆ ನಡೆಸಲಿದ್ದು, ರಾಜ್ಯಪಾಲರ ಆದೇಶವನ್ನು ಎತ್ತಿ ಹಿಡಿಯುತ್ತಾ ಅಥವಾ ತಿರಸ್ಕರಿಸುತ್ತಾ ಎಂಬುದು ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ.




ಹೌದು ಮುಡಾ ಹಗರಣ ರಾಜ್ಯ ರಾಜಕಾರಣದಲ್ಲಿ ಮತ್ತೊಂದು ಮಹಾಯುದ್ಧಕ್ಕೆ ಸಾಕ್ಷಿಯಾಗುವಂತಿದೆ. ಸದ್ಯ ಕೇಸ್ ಹೈಕೋರ್ಟ್‌ನಲ್ಲಿದ್ದು, ಗುರುವಾರ ಮತ್ತೆ ವಿಚಾರಣೆಗೆ ಬರಲಿದೆ. ಏನಾಗಲಿದೆ ಎಂಬ ಕುತೂಹಲ ಮೂಡಿದೆ.

ಈ ಮಧ್ಯೆ ಡಿಸಿಎಂ ಡಿಕೆ ಶಿವಕುಮಾರ್ ಆಗಸ್ಟ್ 31ಕ್ಕೆ ರಾಜ್ಯಪಾಲರ ನಡೆ ಖಂಡಿಸಿ, ರಾಜಭವನ ಚಲೋ ರ‍್ಯಾಲಿಗೆ ಕರೆ ನೀಡಿದ್ದಾರೆ. ಅತ್ತ ಸಿಎಂ ಸಿದ್ದರಾಮಯ್ಯ ಪರ ಶೋಷಿತ ಸಮುದಾಯಗಳು ಪ್ರತಿಭಟನೆ ನಡೆಸಿವೆ.

ಮುಡಾ ಹಗರಣದ ದಿನಕ್ಕೊಂದು ತಿರುವು ಪಡೆದುಕೊಳ್ಳುತ್ತಿರುವ ಮಧ್ಯೆಯೇ ಕಾಂಗ್ರೆಸ್ ಹೈಕಮಾಂಡ್ ಸಿಎಂ ಸಿದ್ದರಾಮಯ್ಯ ಬೆನ್ನಿಗೆ ನಿಂತಿದೆ. ರಾಜ್ಯಪಾಲರ ವಿರುದ್ಧ ಸಮರಕ್ಕೆ ಕರೆ ನೀಡಿದೆ. ಇಂದು ಹೈಕೋರ್ಟ್‌ನಲ್ಲಿ ವಿಚಾರಣೆ ಏನಾಗಲಿದೆ ಎಂಬುದರ ಮೇಲೆ ಕಾಂಗ್ರೆಸ್‌ನ ಮುಂದಿನ ಹೋರಾಟ ನಿಂತಿದೆ.

## ಮಹಿಳೆ ಕಿಡ್ನ್ಯಾಪ್ ಪ್ರಕರಣದಲ್ಲಿ ಹೆಚ್.ಡಿ. ರೇವಣ್ಣಗೆ ಬಿಗ್ ರಿಲೀಫ್.!



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮಹಿಳೆಯ ಕಿಡ್ನಾಪ್ ಪ್ರಕರಣಕ್ಕೆ ಸಂಬಂಧಿಸಿದಂತೆ ಜೆಡಿಎಸ್ ಶಾಸಕ ಹೆಚ್ ಡಿ ರೇವಣ್ಣಗೆ ನೀಡಿರುವ ಜಾಮೀನು ರದ್ದು ಕೋರಿ SIT ಸಲ್ಲಿಸಿದ್ದ ಅರ್ಜಿಯನ್ನು ಬುಧವಾರ ಹೈಕೋರ್ಟ್ ವಜಾ ಮಾಡಿದೆ. ಇದರಿಂದ ರೇವಣ್ಣಗೆ ಬಿಗ್ ರಿಲೀಫ್ ಸಿಕ್ಕಂತಾಗಿದೆ.

ಹೌದು ಪ್ರಜ್ವಲ್ ರೇವಣ್ಣ ಅತ್ಯಾಚಾರ ಪ್ರಕರಣದ ಸಂತ್ರಸ್ತೆ ಅಪಹರಣ ಪ್ರಕರಣಕ್ಕೆ ಸಂಬಂಧಿಸಿದಂತೆ ರೇವಣ್ಣ ಅವರಿಗೆ ಜನಪ್ರತಿನಿಧಿಗಳ ಕೋರ್ಟ್ ನೀಡಿದ್ದ ಜಾಮೀನು ರದ್ದುಗೊಳಿಸುವಂತೆ ಎಸ್ಐಟಿ ಹೈಕೋರ್ಟ್ ಗೆ ಅರ್ಜಿ ಸಲ್ಲಿಸಿತ್ತು. ಆದ್ರೆ, ಹೈಕೋರ್ಟ್ ಬುಧವಾರ ಎಸ್ಐಟಿ ಅರ್ಜಿಯನ್ನು ವಜಾಗೊಳಿಸಿ ಆದೇಶ ಹೊರಡಿಸಿದೆ. ಇನ್ನು ಇದೇ ಪ್ರಕರಣದ ಎಲ್ಲಾ ಆರೋಪಿಗಳಿಗೂ ಜಾಮೀನು ಮಂಜೂರು ಮಾಡಿದೆ.

### ಕದಳಿಶ್ರೀ ವೇದಿಕೆಯಿಂದ ವಚನ ಕಂಠಪಾಠ ಸ್ಪರ್ಧೆ, ಅಮೃತಭೋಜನ

## ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ




■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಶಾಲೆಗಳು ಮಕ್ಕಳ ಉಚಿತ ಶಿಕ್ಷಣದ ಗುರಿ ಹೊಂದಿದ್ದು, ಇದು ಪೋಷಕರ ಮೇಲಿನ ಆರ್ಥಿಕ ಹೊರೆಯನ್ನು ಕಡಿಮೆಗೊಳಿಸಿ ಮಕ್ಕಳು ಗುಣಮಟ್ಟದ ಶಿಕ್ಷಣ ಪಡೆಯಲು ಸಹಕಾರಿಯಾಗಿದೆ ಎಂದು ನಿವೃತ್ತ ಪ್ರಾಚಾರ್ಯೆ ಪ್ರೇಮಾ ಹಂದಿಗೋಳ ಅಭಿಪ್ರಾಯಪಟ್ಟರು.

ಅವರು ಮಂಗಳವಾರ ಗದಗ ಜಿಲ್ಲಾ ಅಖಿಲ ಭಾರತ ಶರಣ ಸಂಕುಲನದ ಶರಣೆ ಅಕ್ಕಮಹಾದೇವಿಯ ಕದಳಿಶ್ರೀ ವೇದಿಕೆ ವತಿಯಿಂದ ಬೆಟಗೇರಿಯ ಸರಕಾರಿ ಹಿರಿಯ ಪ್ರಾಥಮಿಕ ಕನ್ನಡ ಹೆಣ್ಣುಮಕ್ಕಳ ಶಾಲೆ ನಂ. 3ರಲ್ಲಿ ಜರುಗಿದ ಶ್ರಾವಣದ ಅಮೃತ ಭೋಜನ-ಜ್ಞಾನ ಸಿಂಚನ ಕಾರ್ಯಕ್ರಮದಲ್ಲಿ ಅತಿಥಿಯಾಗಿ ಪಾಲ್ಗೊಂಡು ವಚನ ಕಂಠಪಾಠ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಿ ಮಾತನಾಡಿದರು. ಸರಕಾರಿ ಶಾಲೆಯ ಶಿಕ್ಷಕ ಸಮುದಾಯದವರು ಸೂಕ್ತ ತರಬೇತಿ ಪಡೆದು ಮಕ್ಕಳ ಮನೆಯ ಹಾಗೂ ಮನಸ್ಸಿನ ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಅರಿತು, ಆತ್ಮೀಯ ಒಡನಾಟದೊಂದಿಗೆ ಬೋಧನೆಯಲ್ಲಿ ತೊಡಗುತ್ತಿರುವದು ಶ್ಲಾಘನೀಯ ಎಂದರು. ಶಾಲೆಯ ಶಿಕ್ಷಕ ಎಚ್.ಎಸ್. ಮಂಗಳೂರ ಮಾತನಾಡಿ, ಬಾಲ್ಯದಲ್ಲಿಯೇ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಅಕ್ಷರ ಜ್ಞಾನದ ಜೊತೆಗೆ ನೈತಿಕ ಮೌಲ್ಯಗಳು ಮಕ್ಕಳನ್ನು ಸಮೃದ್ಧಗೊಳಿಸುತ್ತವೆ ಎಂದರು.

ವೇದಿಕೆಯ ಮೇಲೆ ಸುಶೀಲಾ ಕೋಟಿ, ಶಾಂತಾ ಗೌಡರ, ರಂಜನಾ ಕೋಟಿ, ಜಯಲಕ್ಷ್ಮೀ ಗುಗ್ಗರಿ ಉಪಸ್ಥಿತರಿದ್ದರು. ಕದಳಿಶ್ರೀ ವೇದಿಕೆಯಿಂದ ವಿದ್ಯಾರ್ಥಿಗಳಿಗೆ ಬರವಣಿಗೆಯ ಸಾಮಗ್ರಿಗಳನ್ನು ವಿತರಿಸಿ, ಸಿಹಿ ಭೋಜನದ ವ್ಯವಸ್ಥೆ ಮಾಡಲಾಗಿತ್ತು. ಇದೇ ಸಂದರ್ಭದಲ್ಲಿ ಅತಿಥಿಗಳು ಸೇರಿದಂತೆ ಅಡುಗೆ ಸಿಬ್ಬಂದಿಯವರನ್ನು ಸನ್ಮಾನಿಸಿ ಗೌರವಿಸಲಾಯಿತು. ವಚನ ಗಾಯನದಲ್ಲಿ ವಿದ್ಯಾರ್ಥಿನಿಯರಾದ ಧನಲಕ್ಷ್ಮೀ ಕಾಳಗಿ, ದಿವ್ಯಾ ಬಡಿಗೇರ, ಪವಿತ್ರಾ ಸೊರಟೂರ, ಭೂಮಿಕಾ ವಗ್ಗಾ, ದೀಕ್ಷಾ ಕೊಟೇಕಲ್ಲ, ಸ್ವಾತಿ ಮುಂಡರಗಿ, ನಿವೇದಿತಾ ಗೋಟೂರ, ಶ್ರಾವಣಿ ರಜಪೂತ ಮುಂತಾದವರು ಪಾಲ್ಗೊಂಡಿದ್ದರು.

ಗಾಯಕ ಶಿವಶಂಕರ ದೊಡ್ಡಮನಿ ಸುಶ್ರಾವ್ಯವಾಗಿ ವಚನ ಗಾಯನ ನಡೆಸಿಕೊಟ್ಟರು. ಸಂಪನ್ಮೂಲ ವ್ಯಕ್ತಿ ಕೆ.ಎಸ್. ಬೇಲೇರಿ ಸ್ವಾಗತಿಸಿದರು. ವಿ.ಎನ್. ನೀಲಗುಂದ ನಿರೂಪಿಸಿದರು. ಡಿ.ವೈ. ಕಂಬಳಿ ವಂದಿಸಿದರು. ಲಕ್ಷ್ಮೀ ಹೊಸಮನಿ, ಗೀತಾ ನವಲೆ, ಲೀಲಾವತಿ ಗಾಳಿ ಮುಂತಾದವರು ಪಾಲ್ಗೊಂಡಿದ್ದರು.

ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಲಾ ಮುಖ್ಯೋಪಾಧ್ಯಾಯೆ ಪಿ.ಆರ್. ನಿಡಗುಂದಿ, ಮಕ್ಕಳು ಸರಕಾರಿ ಶಾಲೆಗಳಲ್ಲಿ ಶಿಕ್ಷಕರೊಂದಿಗೆ ಉತ್ತಮ ಬಾಂಧವ್ಯ ಹೊಂದಿ ಕಲಿಕೆಯಲ್ಲಿ ಆಸಕ್ತಿಯಿಂದ ಪಾಲ್ಗೊಳ್ಳುತ್ತಿದ್ದಾರೆ. ಕದಳಿಶ್ರೀ ವೇದಿಕೆ ಸೇರಿದಂತೆ ಹಲವಾರು ಸಮಾಜಸೇವಾ ಸಂಘಟನೆಗಳು ಸರಕಾರಿ ಶಾಲೆಗಳ ಬೆಂಬಲಕ್ಕೆ ನಿಂತಿರುವದು ಸಂತಸದ ಸಂಗತಿ ಎಂದರು.

## ಗಜಾನನೋತ್ಸವ ಭಗವಾ ಧ್ವಜಾರೋಹಣ



■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಸುದರ್ಶನ ಚಕ್ರ ಯುವ ಮಂಡಳ, ಹಿಂದೂ ಮಹಾ ಗಣಪತಿ ಗದಗ ಜಿಲ್ಲಾ ಸಂಘಟನೆಗಳಿಂದ ಗದಗ ಕಾಟನ್ ಮಾರ್ಕೆಟ್ ರಸ್ತೆಯಲ್ಲಿ ಪ್ರತಿಷ್ಠಾಪಿಸಲ್ಪಡುವ ಸಾರ್ವಜನಿಕ ಗಜಾನನೋತ್ಸವ ಮಂಟಪಕ್ಕೆ ಭಗವಾ ಧ್ವಜಾರೋಹಣವು ಬುಧವಾರ ಜರುಗಿತು. ಈ ವರ್ಷದ ಉತ್ಸವ ಸಮಿತಿಯ ಗೌರವ ಅಧ್ಯಕ್ಷರಾಗಿರುವ ಯುವ ಧುರೀಣ ಎಸ್.ಎಚ್. ಶಿವನಗೌಡರ ಹಾಗೂ ಅಧ್ಯಕ್ಷ ಸುಧೀರ ಕಾಟೀಗರ ಅವರು ಭಗವಾ ಧ್ವಜಾರೋಹಣ ನೆರವೇರಿಸಿ ಗಜಾನನೋತ್ಸವ ಕಾರ್ಯಕಲಾಪಗಳಿಗೆ ಚಾಲನೆ ನೀಡಿದರು. ಮಂಡಳದ ಸಂಸ್ಥಾಪಕ ಅಧ್ಯಕ್ಷ ರಾಘವೇಂದ್ರ ಹಬೀಬ ಧಾರ್ಮಿಕ ಪೂಜಾ ಕೈಂಕರ್ಯ ಪೂರೈಸಿದರು. ಈ ಸಂದರ್ಭದಲ್ಲಿ ಕಾಂತಿಲಾಲ ಬನ್ಸಾಲಿ, ರವಿ ಮಾಳೇಕೊಪ್ಪಮಠ, ಸುರೇಶ ಮೇದಾರ, ಸುರೇಶ ಅಬ್ಬಿಗೇರಿ, ಬಸವರಾಜ ದೇಗುಲ, ಅಶ್ವಿನಿ ಜಗತಾಪ, ವಂದನಾ ವೆರ್ಣೆಕರ, ರಂಜನಾ ಕೋಟಿ, ಲತಾ ಮುತ್ತಿನಪೆಂಡಿಮಠ, ರತ್ನಾ ಕುರಗೋಡ, ಅನಸೂಯಾ ಸಿರೇಗಾರ ಸೇರಿದಂತೆ ಎರಡೂ ಸಂಘಟನೆಗಳ ಪದಾಧಿಕಾರಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

### ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಚಿವ ಸಂತೋಷ್ ಲಾಡ್

# ಜವಾಬ್ದಾರಿ ಅರಿತು ಕಾರ್ಯ ನಿರ್ವಹಿಸಿ



■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಬೆಂಗಳೂರು ನಗರದಂತೆ ಹುಬ್ಬಳ್ಳಿ-ಧಾರವಾಡ ನಗರಗಳು ಬೆಳವಣಿಗೆ ಹೊಂದುತ್ತಿವೆ. ಅವಳಿ ನಗರಗಳ ಬೆಳವಣಿಗೆಗೆ ಅಧಿಕಾರಿಗಳು ಪರಸ್ಪರ ಒಗ್ಗಟ್ಟಿನಿಂದ ಕೆಲಸ ಮಾಡಬೇಕು. ಅಲ್ಲದೇ ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ಅರಿತುಕೊಂಡು ಕಾರ್ಯ ನಿರ್ವಹಿಸಬೇಕು ಎಂದು ಕಾರ್ಮಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಹೇಳಿದರು.

ಬುಧವಾರ ಐಟಿ ಪಾರ್ಕ್‌ನಲ್ಲಿರುವ ಕರ್ನಾಟಕ ನಗರ ಮೂಲ ಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮದ ಸಭಾಂಗಣದಲ್ಲಿ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ಹುಬ್ಬಳ್ಳಿ-ಧಾರವಾಡ ಅವಳಿ ನಗರಗಳ ಭವಿಷ್ಯದ ಹಿತದೃಷ್ಟಿಯಿಂದ ಮುಂದಿನ 25 ವರ್ಷಗಳಲ್ಲಿ ನಗರಗಳು ಹೇಗೆ ಬೆಳವಣಿಗೆ ಆಗಬೇಕು ಎಂಬುದನ್ನು ಅರಿತುಕೊಂಡು ಉತ್ತಮ ಯೋಜನೆಗಳನ್ನು ರೂಪಿಸಬೇಕಿದೆ. ಬೆಂಗಳೂರು ನಗರಕ್ಕೆ ಪೈಪೋಟಿ ನೀಡುವ ನಿಟ್ಟಿನಲ್ಲಿ ಅವಳಿ ನಗರಗಳು ಅಭಿವೃದ್ಧಿ ಆಗಬೇಕು. ಆಧುನಿಕ ವಿಜ್ಞಾನ-ತಂತ್ರಜ್ಞಾನವನ್ನು ಉತ್ತಮ ರೀತಿಯಲ್ಲಿ ಬಳಸಿಕೊಳ್ಳಲು ಮುಂದಾಗಬೇಕಿದೆ. ಯೋಜನೆಗಳನ್ನು ಸರಿಯಾದ ರೀತಿಯಲ್ಲಿ ಕಾರ್ಯರೂಪಕ್ಕೆ ತರಲು ಯತ್ನಿಸಬೇಕು. ಆನ್‌ಲೈನ್ ವ್ಯವಸ್ಥೆ, ಹೊಸ ತಂತ್ರಜ್ಞಾನ ಮತ್ತು ನವೀನ ಕಲ್ಪನೆಯ ಯೋಜನೆಗಳ ಬಗ್ಗೆ ಮಾಹಿತಿ ಪಡೆದುಕೊಳ್ಳಬೇಕು ಎಂದು ಅವರು ಅಧಿಕಾರಿಗಳಿಗೆ ತಿಳಿಸಿದರು.

ಘನ ತ್ಯಾಜ್ಯ ನಿರ್ವಹಣಾ ಘಟಕಗಳಿಗೆ ಕಾಂಪೌಂಡ್ ನಿರ್ಮಿಸಬೇಕು. ಸರ್ಕಾರಿ ಉದ್ಯಾನಗಳನ್ನು ಕೈಗಾರಿಕೋದ್ಯಮಿಗಳು ಹಾಗೂ ಎನ್‌ಜಿಒಗಳಿಗೆ ನಿರ್ವಹಣೆ ಮಾಡಲು ಅವಕಾಶ ಕಲ್ಪಿಸಬೇಕಾಗಿದೆ. ಸಾರ್ವಜನಿಕರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಮುಂದಾಗಬೇಕು ಎಂದರು.

ಹುಬ್ಬಳ್ಳಿ-ಧಾರವಾಡ ಸ್ಮಾರ್ಟ್ ಸಿಟಿ ಯೋಜನೆಯ ವ್ಯವಸ್ಥಾಪಕ ನಿರ್ದೇಶಕ ರುದ್ರೇಶ ಗಾಳಿ ಮಾತನಾಡಿ, ಹುಬ್ಬಳ್ಳಿ-ಧಾರವಾಡ ಸ್ಮಾರ್ಟ್ ಸಿಟಿ ಯೋಜನೆಯಡಿಯಲ್ಲಿ ಚಿಟಗುಪ್ಪಿ ಹಾಗೂ ಮೇದಾರ ಓಣಿಯ ಆಸ್ಪತ್ರೆಗಳನ್ನು ನಿರ್ಮಿಸಲಾಗಿದೆ. ತೋಳನಕೆರೆ, ಉಣಕಲ್ ಕೆರೆ ಹಾಗೂ ಮಹಾತ್ಮ ಗಾಂಧಿ ಪಾರ್ಕ್‌ಗಳನ್ನು ಸ್ಮಾರ್ಟ್ ಸಿಟಿ ಯೋಜನೆಯಡಿ ಅಭಿವೃದ್ಧಿಪಡಿಸಲಾಗಿದೆ. ಜನತಾ ಬಜಾರ್ ಮಾರಾಟ ಮಳಿಗೆಯಲ್ಲಿ ಮೊದಲಿನ ವ್ಯಾಪಾರಸ್ಥರಿಗೆ ಅನುಕೂಲ ಮಾಡಿ ಕೊಡುವ ಕುರಿತು ಸಭೆ ನಡೆಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ., ಮಹಾಪೌರರಾದ ರಾಮಣ್ಣ ಬಡಿಗೇರ, ಉಪಮಹಾಪೌರರಾದ ದುರ್ಗಮ್ಮ ಬೀಜವಾಡ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಆಯುಕ್ತರಾದ ಡಾ. ಈಶ್ವರ ಉಳ್ಳಾಗಡ್ಡಿ, ಪಾಲಿಕೆಯ ಸದಸ್ಯರು, ಅಧಿಕಾರಿಗಳು ಉಪಸ್ಥಿತರಿದ್ದರು.

#### ಆಸ್ತಿ ತೆರಿಗೆ ಬಗ್ಗೆ ಗಮನ ಹರಿಸಿ

ಬಿಲ್ ಕಲೆಕ್ಟರ್‌ಗಳು ವಲಯವಾರು ಆಸ್ತಿಗಳನ್ನು ಸರಿಯಾಗಿ ಗುರುತಿಸಿ, ಆಸ್ತಿ ತೆರಿಗೆಯನ್ನು ಸಂಗ್ರಹಿಸಬೇಕು. 1,81,148 ವಸತಿ ಆಸ್ತಿಗಳು, 34,798 ವಾಣಿಜ್ಯ ಆಸ್ತಿಗಳು ಹಾಗೂ 1,22,656 ಖಾಲಿ ಪ್ರದೇಶಗಳು ಸೇರಿ ಒಟ್ಟಾರೆ 3,38,602 ಆಸ್ತಿಗಳು ಪಾಲಿಕೆಗೆ ಒಳಪಡುತ್ತವೆ. ಒಟ್ಟು 2,744 ಬಾಡಿಗೆ ಪ್ರದೇಶಗಳಲ್ಲಿ, 1649 ಬಾಡಿಗೆ ಪ್ರದೇಶಗಳನ್ನು ಗುರುತಿಸಲಾಗಿದೆ. ಇನ್ನೂ 1,095 ಪ್ರದೇಶಗಳನ್ನು ಗುರುತಿಸುವುದು ಬಾಕಿಯಿವೆ. ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ವ್ಯಾಪ್ತಿಯ ಆಸ್ತಿಗಳ ಬಗ್ಗೆ ಅಧಿಕಾರಿಗಳು ಮಾಹಿತಿ ಕ್ರೋಢೀಕರಿಸಬೇಕು ಎಂದು ಸಚಿವ ಸಂತೋಷ್ ಲಾಡ್ ಅಧಿಕಾರಿಗಳಿಗೆ ಸೂಚಿಸಿದರು.

### ಸಾಪ್ತಾಹಿಕ ವಚನ ಶ್ರಾವಣ ಕಾರ್ಯಕ್ರಮದಲ್ಲಿ ಆಯ್.ಕೆ. ಕಮ್ಮಾರ ಅಭಿಮತ

## ವಚನಗಳಿಂದ ಸಮಸ್ಯೆಗಳಿಗೆ ಸಮಾಧಾನ




■ವಿಜಯಸಾಕ್ಷಿ ಸುದ್ದಿ, ಗದಗ

12ನೇ ಶತಮಾನದಲ್ಲಿ ನಡೆದ ಬಸವಾದಿ ಶರಣರ ಕ್ರಾಂತಿಕಾರಿ ನಡೆ ಮತ್ತು ವಚನಗಳ ಮೂಲಕ ಸಮಾಜ ತಿದ್ದುವ ಕಾರ್ಯಗಳು ಇಂದಿಗೂ ಪ್ರಸ್ತುತವಾಗಿವೆ. ಬಸವಣ್ಣನವರು ತಿಳಿಸಿದ ಕಳಬೇಡ ಕೊಲಬೇಡ ಹುಸಿಯ ನುಡಿಯಲು ಬೇಡ ಎಂಬ ವಚನದಲ್ಲಿನ ಸಪ್ತ ಸೂತ್ರಗಳನ್ನು ಪಾಲಿಸಿದರೆ ಸಮಾಜದಲ್ಲಿ ಯಾವುದೇ ಸಮಸ್ಯೆಗಳು ಉದ್ಭವಿಸಲಾರವು. ಈಗಿರುವ ನಾನಾವಿಧದ ಸಮಸ್ಯೆಗಳು ಇಲ್ಲದಾಗುವವು. ಈ ನಿಟ್ಟಿನಲ್ಲಿ ವಚನಗಳಿಂದ ಅನೇಕ ಸಮಸ್ಯೆಗಳಿಗೆ ಸಮಾಧಾನ ದೊರೆಯವದೆಂದು ಪತ್ರಕರ್ತರಾದ ಆಯ್.ಕೆ. ಕಮ್ಮಾರ ಅಭಿಪ್ರಾಯಪಟ್ಟರು.

ಎಸ್‌ವಾಯ್‌ಬಿಎಂಎಸ್ ಯೋಗಪಾಠಶಾಲೆಯ ಬಸವ ಯೋಗ ಕೇಂದ್ರ ಗದಗ ಮತ್ತು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಇವರುಗಳ ಸಹಯೋಗದಲ್ಲಿ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರ (ಬಸಪ್ರಭೆ ಕ್ಯಾಂಪಸ್)ದಲ್ಲಿ ನಡೆದ 4ನೇ ಶ್ರಾವಣ ಸೋಮವಾರದ ಸಾಪ್ತಾಹಿಕ ವಚನ ಶ್ರಾವಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವೇದಿಕೆಯಲ್ಲಿ ನಿವೃತ್ತ ಇಂಜಿನಿಯರ್ ವಿ.ಎಚ್. ಪಾಟೀಲ, ದಾಸೋಹ ಸೇವಾಕರ್ತರಾದ ಶಕುಂತಲಾ ಬ್ಯಾಳಿ, ಶೋಭಾ ಭಾಂಡಗೆ ಉಪಸ್ಥಿತರಿದ್ದರು. ಬಸವ ಯೋಗ ಕೇಂದ್ರದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಡಾ. ಎಂ.ವಿ. ಐಹೊಳ್ಳಿ, ಜೆ.ಪಿ. ಕಟ್ಟಿಮನಿ, ಎಸ್.ಎನ್. ಹಕಾರೆ, ಡಾ. ಎ.ಡಿ. ಹುಳಪಲ್ಲೆ, ವಿ.ಎಂ. ಮುಂದಿನಮನಿ, ಸುನಂದಾ ಅರಹುಣಸಿ, ಕುಸುಮಾ ಕುರಗೋಡ, ಜಯಶ್ರೀ ವಸ್ತ್ರದ, ವಿಜಯಲಕ್ಷ್ಮೀ ಉಪವಾಸಿ, ಅನ್ನಪೂರ್ಣ ಅಸೂಟಿ, ಶಾಂತಾ ಮುಂದಿನಮನಿ ಮುಂತಾದವರು ಉಪಸ್ಥಿತರಿದ್ದರು.

ಪ್ರಾರಂಭದಲ್ಲಿ ಶಾಂತಾ ಕುಂದಗೋಳ ಸಾಮೂಹಿಕ ಬಸವ ಪ್ರಾರ್ಥನೆ ಹೇಳಿದರು. ಶಿವನಗೌಡ ಗೌಡರ ಸರ್ವರಿಗೂ ಸ್ವಾಗತ ಕೋರಿ, ಪ್ರಾಸ್ತಾವಿಕ ನುಡಿ ತಿಳಿಸಿದರು. ವಿಜಯಾ ಚನ್ನಶೆಟ್ಟಿ ವಚನ ಪಠಣ ಮಾಡಿದರು. ಯೋಗ ಪಾಠಶಾಲೆಯ ಕಾರ್ಯಕರ್ತರಾದ ಅಂದಾನೆಪ್ಪ ವಿಭೂತಿ ವಂದಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಗದಗ-ಬೆಟಗೇರಿ ನಗರಸಭೆ ಮಾಜಿ ಅಧ್ಯಕ್ಷರಾದ ಶಿವಲೀಲಾ ಅಕ್ಕಿ ಮಾತನಾಡಿ, ಸಾಪ್ತಾಹಿಕ ವಚನ ಶ್ರಾವಣ ಕಾರ್ಯಕ್ರಮ ನಡೆಸುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ. ಇದರಿಂದ ಜನತೆಗೆ ವಚನಗಳ ಮಹತ್ವದ ಅರಿವಾಗುವುದು ಎಂದು ಹೇಳಿದರು.

## ಎಲ್ಲ ಸಮಸ್ಯೆಗಳಿಗೆ ಶಿಕ್ಷಣವೇ ಔಷಧ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಸರಕಾರಿ ಪ್ರಾಥಮಿಕ ಹೆಣ್ಣುಮಕ್ಕಳ ಶಾಲೆಗೆ ಗ್ರಾಮ ಪಂಚಾಯಿತಿ ಅನುದಾನದಲ್ಲಿ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಶುದ್ಧ ಕುಡಿಯುವ ನೀರಿನ ಯಂತ್ರವನ್ನು ವಿತರಿಸಿದರು.

ನಂತರ ಮಾತನಾಡಿದ ಅವರು, ಗ್ರಾಮೀಣ ಭಾಗದ ಶಾಲಾ ಮಕ್ಕಳಿಗೆ ಶುದ್ಧ ಕುಡಿಯುವ ನೀರನ್ನು ಪೂರೈಕೆ ಮಾಡುವುದು ನಮ್ಮ ಕರ್ತವ್ಯವಾಗಿದೆ. ಗ್ರಾಮ ಆಡಳಿತ ಮಂಡಳಿ ಹಾಗೂ ಅಧಿಕಾರಿಗಳ ಸಹಕಾರದಿಂದ ಮಕ್ಕಳ ಗ್ರಾಮ ಸಭೆಯಲ್ಲಿನ ಮಕ್ಕಳ ಬೇಡಿಕೆಯಂತೆ ಈ ಯಂತ್ರ ವಿತರಿಸಲು ಸಾಧ್ಯವಾಯಿತು ಎಂದರು.

ಗ್ರಾ.ಪಂ ಉಪಾಧ್ಯಕ್ಷೆ ಪುಷ್ಪಾ ಪಾಟೀಲ ಮಾತನಾಡಿ, ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ಹೆಚ್ಚು ಒತ್ತು ನೀಡಿ ಮುನ್ನೆಲೆಗೆ ತರಬೇಕು ಎಂದರು. ಗ್ರಾ.ಪಂ ಸದಸ್ಯ ಪೀರಸಾಬ ನದಾಫ ಮಾತನಾಡಿ, ಮಕ್ಕಳಿಗೆ ಮುಖ್ಯವಾಗಿ ಶುದ್ಧವಾದ ಆಹಾರ, ನೀರು ಮತ್ತು ಗುಣಮಟ್ಟದ ಶಿಕ್ಷಣದ ಅವಶ್ಯಕತೆ ಇದ್ದು, ನಾವೆಲ್ಲರೂ ಸೇರಿ ಅಂತಹ ಪರಿಸರವನ್ನು ನಿರ್ಮಿಸಬೇಕಾಗಿದೆ ಎಂದರು. ತಾಲೂಕಾ ಅಕ್ಷರ ದಾಸೋಹ ನಿರ್ದೇಶಕ ಶಂಕರ ಹಡಗಲಿ ಮಾತನಾಡಿ, ಶಿಕ್ಷಣವೇ ಎಲ್ಲ ಸಮಸ್ಯೆಗಳಿಗೆ ದಿವ್ಯ ಔಷಧವಾಗಿದ್ದು, ಅದನ್ನು ಎಲ್ಲರಿಗೂ ತಲುಪಿಸುವ ಜವಾಬ್ದಾರಿ ನಮ್ಮೆಲ್ಲರದ್ದಾಗಿದೆ ಎಂದರು.

ಎಸ್‌ಡಿಎಂಸಿ ಅಧ್ಯಕ್ಷ ನಾಗರಾಜ ಖಂಡು ಅಧ್ಯಕ್ಷತೆ ವಹಿಸಿದ್ದರು. ಗ್ರಾ.ಪಂ ಸದಸ್ಯರಾದ ಅನ್ನಪೂರ್ಣ ರಿತ್ತಿ, ರಜೀಯಾಬೇಗಂ ತಹಸೀಲ್ದಾರ, ಎಸ್‌ಡಿಎಂಸಿ ಉಪಾಧ್ಯಕ್ಷೆ ಸಿದ್ದಮ್ಮ ಸಜ್ಜನರ, ಚಂದ್ರಶೇಖರ ಬಣವಿ, ಫಕ್ಕೀರಪ್ಪ ತಳವಾರ, ಮಲ್ಲಪ್ಪ ಅಬ್ಬಿಗೇರಿ, ಚನ್ನಪ್ಪ ಯಲಿಶಿರುಂದ, ಈಶಪ್ಪ ಹಡಗಲಿ, ಜ್ಯೋತಿ ಹಳ್ಳಿ, ಯಶೋದಾ ಉದ್ದಾರ, ರೇಣುಕಾ ಹಿರೇಹಾಳ, ಸುವರ್ಣ ಗುಂಜಳ, ಜುಲೇಖಾಬಿ ದೌಲತ್ತರ ಉಪಸ್ಥಿತರಿದ್ದರು.

### ಪಟ್ಟಣ ಅಭಿವೃದ್ಧಿ ಸಮಿತಿಯ ಸಭೆಯಲ್ಲಿ ಡಾ. ಪ್ರಕಾಶಭಟ್ಟ

## ಸಾಂಸ್ಕೃತಿಕ ವಾತಾವರಣ ನಿರ್ಮಿಸಲು ಶ್ರಮಿಸಿ




■ವಿಜಯಸಾಕ್ಷಿ ಸುದ್ದಿ, ನರೇಗಲ್

ಪಟ್ಟಣ ಮತ್ತು ಮಜಿರೆ ಗ್ರಾಮಗಳಲ್ಲಿ ರಚನಾತ್ಮಕ ಕಾರ್ಯಗಳ ಮೂಲಕ ಅಭಿವೃದ್ಧಿ ಮಾಡಲು ಮುಂದಾಗಿ. ಇದರಿಂದ ಜನ ಸಮೂಹ ನಿಮ್ಮ ಕಡೆಗೆ ಆಕರ್ಷಿಸಲ್ಪಡುತ್ತದೆ. ಇದರಿಂದ ಜನಾಂದೋಲನ ಏರ್ಪಡುತ್ತದೆ. ಎಲ್ಲರ ಬೆಂಬಲದೊಂದಿಗೆ ಪಟ್ಟಣದಲ್ಲಿ ಇನ್ನಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡಲು ಸಹಾಯಕವಾಗುತ್ತದೆ ಎಂದು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಗೌರವ ಪ್ರಾಧ್ಯಾಪಕ ಡಾ. ಪ್ರಕಾಶಭಟ್ಟ ಹೇಳಿದರು.

ಪಟ್ಟಣದ ಗ್ರಾಮಸೇವಾ ಸಂಘದಲ್ಲಿ ಮಂಗಳವಾರ ನಡೆದ ನರೇಗಲ್ ಪಟ್ಟಣ ಅಭಿವೃದ್ಧಿ ಸಮಿತಿಯ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಊರಿನಲ್ಲಿ ಸಾಂಸ್ಕೃತಿಕ ವಾತಾವರಣವನ್ನು ನಿರ್ಮಿಸಲು ಯತ್ನಿಸಬೇಕು. ನರೇಗಲ್ಲದ ದೊಡ್ಡಾಟ ಪ್ರಸಿದ್ಧವಾಗಿದೆ. ಈಗ ಈ ದೊಡ್ಡಾಟದ ಹಿರಿಯ ತಲೆಮಾರುಗಳು ಕಣ್ಮರೆಯಾಗುತ್ತಿವೆ. ಯುವಕರಿಗೆ ಈ ದಿಶೆಯಲ್ಲಿ ತರಬೇತಿ ನೀಡಿ ಅವರನ್ನು ತಯಾರು ಮಾಡಿ ಸಾಂಸ್ಕೃತಿಕ ಲೋಕವನ್ನು ಬೆಳೆಸಲು ಪ್ರಯತ್ನಿಸಿ. ಇದರಿಂದ ಯುವಕರು ದುಶ್ಚಟಗಳಿಂದ ದೂರವಿರಲು ಸಹಾಯ ಮಾಡಿದಂತಾಗುತ್ತದೆ ಎಂದು ಹೇಳಿದರು.

ಎಲ್ಲ ಊರುಗಳಲ್ಲಿಯ ಗುಡಿ-ಗುಂಡಾರಗಳು ಈಗೀಗ ದುಶ್ಚಟಗಳ ಅಡ್ಡೆಯಾಗುತ್ತಿವೆ. ಅಂತಹ ಸ್ಥಳಗಳನ್ನು ಸ್ವಚ್ಛಗೊಳಿಸುವ ಕಾರ್ಯಕ್ಕೆ ಸಮಿತಿ ಮುಂದಾಗಬೇಕು. ಊರಿನಲ್ಲಿಯ ಬಾವಿಗಳನ್ನು ಸ್ವಚ್ಛಗೊಳಿಸುವ ಕಾರ್ಯವನ್ನೂ ಮಾಡಲು ಮುಂದಾಗಬೇಕೆಂದರು.

ಸಭೆಯನ್ನುದ್ದೇಶಿಸಿ ಜಯಕಿರಣ ಕುಲಕರ್ಣಿ, ಜಗದೀಶ ಸಂಕನಗೌಡ್ರ, ಶಿವನಗೌಡ ಪಾಟೀಲ, ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ ಮತ್ತಿತರರು ಮಾತನಾಡಿದರು. ಎಚ್.ವಿ. ಈಟಿ ಕಥೆಯೊಂದನ್ನು ಹೇಳಿ ಪ್ರಾಣಿ-ಪಕ್ಷಿಗಳ ಬಗ್ಗೆ ದಯೆ ಇರಬೇಕೆಂದು ತಿಳಿಸಿದರು.

ಸಭೆಯಲ್ಲಿ ಚನ್ನಬಸಪ್ಪ ಕುಷ್ಟಗಿ, ಉಮೇಶಗೌಡ ಪಾಟೀಲ, ದಾದಾಸಾಬ ನದಾಫ್, ರವಿಕುಮಾರ ವ್ಯಾಗೇರಿ, ಮಲ್ಲಿಕಾರ್ಜುನ ಮಲ್ಲನಗೌಡ್ರ, ಕಳಕನಗೌಡ ಪೊಲೀಸ್‌ಪಾಟೀಲ, ಚಂದ್ರಾಮ ಗ್ರಾಮಪುರೋಹಿತ, ಅರ್ಚನಾ ಕೊಂಡಿ, ಶಶಿಕಲಾ ರಾಠೋಡ, ಶಿವಕುಮಾರ ಮಾವಿನಕಾಯಿ, ಹುಚ್ಚಪ್ಪ ಶಿವಣ್ಣವರ, ರೇಖಾ ಸತ್ಯಣ್ಣವರ, ಮಂಜುಳಾ ಪಾಟೀಲ, ಗೀತಾ ಪತ್ತಾರ, ಶಶಿಕಲಾ ರಾಠೋಡ, ಸುಮಾ ಕಲ್ಲೂರ, ಪಿ.ಎಸ್. ಮಣ್ಣೊಡ್ಡರ, ಎಂ.ಕೆ. ಗುಂಡಗೋಪುರಮಠ, ಸಂಗಮೇಶ ಮೆಣಸಿಗಿ, ಈಶ್ವರ ಬೆಟಗೇರಿ, ಶರಣಪ್ಪ ಗಂಗರಗೊಂಡ ಮುಂತಾದವರಿದ್ದರು.

ಮಕ್ಕಳಲ್ಲಿ ನೈತಿಕತೆಯನ್ನು ಬೆಳೆಸಿದರೆ ಅವರು ಮುಂದೆ ಯಾವುದೇ ದುಶ್ಚಟಗಳಿಗೆ ಬಲಿಯಾಗುವುದಿಲ್ಲ. ಅವರಿಗೆ ತಂದೆ-ತಾಯಿ, ಗುರು-ಹಿರಿಯರನ್ನು ಗೌರವಿಸುವ ರೀತಿಯನ್ನು ಕಲಿಸಿ. ಆಗಾಗ್ಗೆ ನೈತಿಕ ಪಾಠದ ಬಗೆಗಿನ ಪ್ರವಚನಗಳನ್ನು, ಕಾರ್ಯಕ್ರಮಗಳನ್ನು ಮಾಡಿದರೆ ಊರಿನಲ್ಲಿ ಒಂದು ಹೊಸ ವಾತಾವರಣ ನಿರ್ಮಾಣವಾಗಿ ಊರು ಸಾಂಸ್ಕೃತಿಕವಾಗಿ ಸಮೃದ್ಧವಾಗುತ್ತದೆ ಎಂದು ಪ್ರಕಾಶಭಟ್ಟ ಹೇಳಿದರು.

## ಜಿಲ್ಲಾಧಿಕಾರಿಗಳಿಗೆ ಪುರಸಭೆ ಸದಸ್ಯರಿಂದ ಗೌರವ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗದಗ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರನ್ನು ಬುಧವಾರ ಪಟ್ಟಣದ ಪುರಸಭೆ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ಸದಸ್ಯರು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸನ್ಮಾನಿಸಿದರು.

ಪಟ್ಟಣದ ಪುರಸಭೆಗೆ ಕಳೆದ ವಾರ ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನಗಳಿಗೆ ಚುನಾವಣೆ ನಡೆದಿದ್ದು, ಜಿಲ್ಲಾಧಿಕಾರಿಗಳು ನೂತನ ಅಧ್ಯಕ್ಷ, ಉಪಾಧ್ಯಕ್ಷರಿಗೆ ಶುಭ ಕೋರಿ ಉತ್ತಮ ಆಡಳಿತ ನೀಡುವಂತೆ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ನೂತನ ಅಧ್ಯಕ್ಷೆ ಯಲ್ಲವ್ವ ದುರ್ಗಣ್ಣವರ, ಉಪಾಧ್ಯಕ್ಷ ಪೀರದೋಷ ಆಡೂರ, ಹಿರಿಯ ಸದಸ್ಯರಾದ ಜಯಕ್ಕ ಕಳ್ಳಿ, ರಾಜಣ್ಣ ಕುಂಬಿ, ಮಹೇಶ ಹೊಗೆಸೊಪ್ಪಿನ, ಬಸವರಾಜ ಓದುನವರ, ಮಂಜುಳಾ ನಂದೆಣ್ಣವರ, ಜಯಕ್ಕ ಅಂದಲಗಿ, ವಿಜಯ ಕರಡಿ, ರಾಮಪ್ಪ ಗಡದವರ, ಸಿಕಂದರ ಕಣಕೆ, ಹಾಗೂ ಮುಖ್ಯಾಧಿಕಾರಿ ಮಹೇಶ ಹಡಪದ ಇದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka